ನಮ್ಮ ಜನ
NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 297 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 18–06–2024 ಮಂಗಳವಾರ | ಪುಟ: 4 | ಬೆಲೆ : ರೂ.2–00
Volume - 01 Issue - 297 | Title- Code: KARKAN 28269 | Chitradurga | Date: 18-06-2024 Tuesday | Page: 4 | Price: Rs. 2-00

ಒಳಪುಟದ ಸುದ್ದಿಗಳು
ಜಾಗೃತಿ ವಹಿಸಿ ಕುಡಿಯುವ ನೀರು ಸರಬರಾಜು ಮಾಡಿ: ತಾ.ಪಂ ಇಒ 2
ಕುಡಿತದ ಚಟದಿಂದ ದೂರವಾಗಿ ಗುಣಾತ್ಮಕ ಬದುಕನ್ನು ಕಟ್ಟಿಕೊಳ್ಳಲು ಮುಂದಾಗಿ 3
ಹೊಸದುರ್ಗ: ಹದ ಮಳೆಗೆ ಚೇತರಿಸಿಕೊಳ್ಳುತ್ತಿರುವ ಅಡಿಕೆ, ತೆಂಗು 4

ಸುದ್ದಿ, ಜಾಹಿರಾತಿಗೆ
9686622252

# ಗ್ಯಾರೆಂಟಿಗೆ ಹಣ ಹೊಂದಿಸಲು ಸರ್ಕಸ್

» ಚಿತ್ರದುರ್ಗ

ವಿವೇಚನೆಯಿಲ್ಲದೆ ತೆಗೆದುಕೊಂಡ ತೀರ್ಮಾನಗಳಿಂದ ರಾಜ್ಯ ಸಂಕಷ್ಟಕ್ಕೆ ಸಿಲುಕಿದೆ. ಜನರು ಸರ್ಕಾರದ ವರ್ತನೆಗೆ ಹಿಡಿಶಾಪ ಹಾಕುತ್ತಿದ್ದಾರೆ ಬೇಕಾಬಿಟ್ಟಿ ಯೋಜನೆಕೊಟ್ಟುಈಗಡೀಸೆಲ್,ಪೆಟ್ರೋಲ್ ದರ ಹೆಚ್ಚಿಸಿದ್ದಾರೆ. ಅದನ್ನು ಇಳಿಕೆ ಮಾಡಿ ಯಥಾಸ್ಥಿತಿ ಮುಂದುವರೆಸಬೇಕು ಎಂದು ಸಂಸದ ಗೋವಿಂದ ಎಂ.ಕಾರಜೋಳ ರಾಜ್ಯ ಸರ್ಕಾರವನ್ನು ಒತ್ತಾಯಿಸಿದರು.

ನಗರದ ಪ್ರವಾಸಿ ಮಂದಿರದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬೇರೆ ರಾಜ್ಯಗಳಿಗಿಂತ ಕಡಿಮೆ ದರ ಎನ್ನುವುದು ಭಂಡತನದ ಹೇಳಿಕೆ. ಗ್ಯಾರೆಂಟಿಗಳಿಗೆ ಹಣ ಹೊಂದಿಸಲು ಸರ್ಕಸ್ ಮಾಡುತ್ತಿದ್ದಾರೆ. ಮೂರು ತಿಂಗಳಿಂದ ಅನ್ನಭಾಗ್ಯ ಹಣ ಹಾಕಿಲ್ಲ ಎಂದು ದೂರಿದರು.

ರಾಜ್ಯ ಸರ್ಕಾರ ಅಸ್ತಿತ್ವಕ್ಕೆ ಬಂದು ಒಂದು ವರ್ಷದಲ್ಲಿ ಒಂದೇ ಒಂದು ಅಭಿವೃದ್ಧಿ ಕೆಲಸ ಆಗಿಲ್ಲ. ಮುದ್ದೇಬಿಹಾಳ ಶಾಸಕ ಅಪ್ಪಾಜಿ ಗೌಡ್ರು ಯಾವ ಪುರುಷಾರ್ಥಕ್ಕೆ ಮುಂದುವರೆಯಬೇಕು ಎಂದು ಪ್ರಶ್ನಿಸಿದ್ದಾರೆ. ಇದೇ ರೀತಿ 40 ಶಾಸಕರು ಬಂಡೇಳುತ್ತಿದ್ದಾರೆ ಎಂದರು.

ಬಿತ್ತನೆಗೆರೈತರಿಗೆಶೇಂಗಾಬೀಜಸಿಗುತ್ತಿಲ್ಲ. ಕಾಳ ಸಂತೆಯಲ್ಲಿ ಹೆಚ್ಚಿನ ದರಕ್ಕೆ ಮಾರಾಟ



ಆಗುತ್ತಿದೆ. ಸಮರ್ಪಕ ಪೂರೈಕೆ ಆಗುತ್ತಿಲ್ಲ. ಬರ ಪರಿಹಾರದ ಹಣವನ್ನೂ ಸರಿಯಾಗಿ ಬಿಡುಗಡೆ ಮಾಡಿಲ್ಲ. ಎಲ್ಲದಕ್ಕೂ ಕೇಂದ್ರದ ಕಡೆ ಬೊಟ್ಟು ಮಾಡಿ ತೋರಿಸುತ್ತಿದ್ದಾರೆ. ಕಳೆದ 74 ವರ್ಷಗಳಲ್ಲಿ ಹೇಗೆ ಆಡಳಿತ ನಡೆದಿದೆ ಅದನ್ನು ಮುಂದುವರೆಸಿ, ಜನರ ದಾರಿ ತಪ್ಪಿಸಬೇಡಿ ಎಂದು ತಿರುಗೇಟು ನೀಡಿದರು.ಕಳೆದ ನಾಲ್ಕು ತಿಂಗಳಿಂದ ಆಡಳಿತ ಯಂತ್ರ ಸಂಪೂರ್ಣ ಕುಸಿದಿದೆ. ಸಚಿವರು ನಿಷ್ಕ್ರಿಯರಾಗಿದ್ದಾರೆ. ಚಿತ್ರದುರ್ಗ ಲೋಕಸಭಾ ಕ್ಷೇತ್ರದಿಂದ ನೂತನವಾಗಿ ಆಯ್ಕೆಯಾಗಿರುವ ನಾನು ಕೆಡಿಪಿ ಸಭೆಯಲ್ಲಿ ಭಾಗವಹಿಸಬಾರದು ಎಂಬ ಕಾರಣಕ್ಕೆ ಕೆಡಿಪಿ ಸಭೆ ಮುಂದೂಡಿದ ಬುದ್ದಿವಂತಿಕೆ ಮಾಡಿದ್ದಾರೆ. ಲೋಕಸಭೆ ಅಧಿವೇಶನ ಪ್ರಾರಂಭದ ಸಮಯಕ್ಕೆ ಸಭೆ ನಿಗಧಿ ಮಾಡಿದ್ದಾರೆ. ನನ್ನನ್ನು ಹೊರತುಪಡಿಸಿ ಕೆಡಿಪಿ ಸಭೆ ಮಾಡುವುದಿದ್ದರೆ ಮಾಡಿ. ಆದರೆ ಜಿಲ್ಲೆಯ ಸಮಗ್ರ ಅಭಿವೃದ್ಧಿ ದೃಷ್ಟಿಕೋನದಿಂದ ಲೋಕಸಭೆ ಅಧಿವೇಶನ ಮುಗಿದ ಬಳಿಕ ಕೆಡಿಪಿ ಸಭೆ ನಡೆಸಿದರೆ ಉತ್ತಮ ಎಂದರು.

ರೇಣುಕಸ್ವಾಮಿ ಕೊಲೆ ಪ್ರಕರಣದಲ್ಲಿ ಗುಪ್ತಚರ ಇಲಾಖೆ ವಿಫಲವಾಗಿದೆ. ಬೆಂಗಳೂರಿನಲ್ಲಿ ಹೊಸಬರ ಚಲನವಲನ ಗಮನಿಸಲು ಪೊಲೀಸರಿಗೆ ಸಾಧ್ಯವಾಗಿಲ್ಲ. ಶೆಡ್‌ನಲ್ಲಿಟ್ಟು ಕೊಲೆ ಮಾಡಿದರೂ ಸಹ ಗೊತ್ತಾಗಿಲ್ಲ. ಸರ್ಕಾರ ಇಲ್ಲ ಅನ್ನಿಸುತ್ತಿದೆ' ಎಂದು ವಾಗ್ದಾಳಿ ನಡೆಸಿದ ಸಂಸದರು ರೇಣುಕಾಸ್ವಾಮಿ ಕುಟುಂಬಕ್ಕೆ ಸಾಂತ್ವನ ಹೇಳಲು ಸ್ಥಳೀಯ ಶಾಸಕರು ವಾರದ ನಂತರಕಾಟಾಚಾರಕ್ಕೆಬಂದುಹೋಗಿದ್ದಾರೆ. ಜಿಲ್ಲಾ ಉಸ್ತುವಾರಿ ಸಚಿವರು ಈವರೆಗೆ ಇತ್ತ ಕಾಲಿಟ್ಟಿಲ್ಲ. ಇದೀಗ ಗೃಹ ಸಚಿವರ ಬಾಲ ಹಿಡಿದುಕೊಂಡು ಬರುತ್ತಾರಾ ಎಂದ ಪ್ರಶ್ನಿಸಿದರು.

ಶಕ್ತಿ ಯೋಜನೆ ಮಾಡಿ ವಿದ್ಯಾರ್ಥಿಗಳನ್ನು ಬಸ್‌ನಲ್ಲಿ ಸಂಚರಿಸದಂತೆ ಮಾಡಿದ್ದಾರೆ. ಕೆಎಸ್‌ಆರ್‌ಟಿಸಿಯ ಎಲ್ಲ ಮಾರ್ಗಗಳಿಗೂ ಶಾಲೆ, ಕಾಲೇಜುಗಳಿಗಾಗಿ ವಿಶೇಷ ಬಸ್ ಬಿಡಬೇಕು ರಾಹುಲ್ ಗಾಂಧಿ ನ್ಯಾಯಾಲಯಕ್ಕೆ ಬಂದು ಹೋದ ಕಾರಣ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರನ್ನು ಬಂಧಿಸುವ ಕಾರ್ಯಕ್ಕೆ ಸರ್ಕಾರ ಮುಂದಾಗಿತು. ಸತ್ತು ಹೋದ ಪ್ರಕರಣದಲ್ಲಿ 80 ವರ್ಷ ದಾಟಿದ ಹಿರಿಯರನ್ನು ಅವಮಾನ ಮಾಡುವಂತೆ ನ್ಯಾಯಾಲಯಕ್ಕೆ ಕರೆತರುವುದು ಸೇಡಿನ ರಾಜಕಾರಣ ಎಂದ ಅವರು. ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಚುನಾವಣೆಗಳನ್ನು ಶೀಘ್ರವೇ ನಡೆಸಬೇಕು. ಈ ಮೂಲಕ ಅಭಿವೃದ್ಧಿಗೆ ವೇಗ ನೀಡುವ ಕಾರ್ಯ ಆಗಬೇಕು ಎಂದು ಒತ್ತಾಯಿಸಿದರು.

ಗೋಷ್ಠಿಯಲ್ಲಿಬಿಜೆಪಿಜಿಲ್ಲಾಧ್ಯಕ್ಷಮುರುಳಿ, ಜೆಡಿಎಸ್ ಜಿಲ್ಲಾಧ್ಯಕ್ಷ ಎಂ.ಜಯ್ಯಣ್ಣ, ರಾಜ್ಯ ಪ್ರಧಾನ ಕಾರ್ಯದರ್ಶಿ ಬಿ.ಕಾಂತರಾಜ್, ಮಾಜಿ ಶಾಸಕ ಎಸ್.ಕೆ.ಬಸವರಾಜನ್, ಜಿಲ್ಲಾ ಮಹಾ ಪ್ರಧಾನ ಕಾರ್ಯದರ್ಶಿ ಗೋಪಾಲಸ್ವಾಮಿ ನಾಯಕ, ಖಂಜಾಚಿ ಎಸ್.ಆರ್.ಗಿರೀಶ್, ಚಿದಾನಂದ್, ರೈತ ಮೋರ್ಚಾದ ಅಧ್ಯಕ್ಷ ವೆಂಕಟೇಶ್ ಯಾದವ್, ಗ್ರಾಮಾಂತರ ಅಧ್ಯಕ್ಷ ಕಲ್ಲೇಶಯ್ಯ ವಕ್ತಾರರಾದ ದಗ್ಗೆ ಶಿವಪ್ರಕಾಶ್, ನಾಗರಾಜ್ ಬೇದ್ರೆ, ಛಲವಾದಿ ತಿಪ್ಪೇಸ್ವಾಮಿ ಸೇರಿದಂತೆ ಇತರರು ಭಾಗವಹಿಸಿದ್ದರು.

## ಸರ್ಕಾರಿ ಶಾಲೆಗಳಲ್ಲಿ ಎಲ್‌ಕೆಜಿ, ಯುಕೆಜಿ ಆರಂಭಕ್ಕೆ ವಿರೋಧ

# ಅಂಗನವಾಡಿ ನೌಕರರ ಪ್ರತಿಭಟನೆ

» ಚಳ್ಳಕೆರೆ

ರಾಜ್ಯ ಸರ್ಕಾರ ಕಳೆದ ವರ್ಷದಿಂದ ಜಾರಿಗೆ ತಂದಿರುವ ಶಿಕ್ಷಣ ನೀತಿಯಿಂದ ಗ್ರಾಮೀಣ ಭಾಗಗಳ ಅಂಗನವಾಡಿ ಕೇಂದ್ರದಲ್ಲಿ ಮಕ್ಕಳ ಹಾಜರಾತಿ ಇಲ್ಲದೆ ಅಂಗನವಾಡಿ ಕೇಂದ್ರಗಳು ಮುಚ್ಚುವ ಸ್ಥಿತಿ ಬಂದಿರುವುದಲ್ಲದೆ, ಅಂಗನವಾಡಿ ಸಹಾಯಕರು, ಕಾರ್ಯಕರ್ತರ ಬದುಕು ಬೀದಿಗೆ ಬರಲಿದ್ದು, ಸರ್ಕಾರಿ ಶಾಲೆಗಳಲ್ಲಿ ಎಲ್‌ಕೆಜಿ, ಯುಕೆಜಿ ತರಗತಿಗಳ ಪ್ರಾರಂಭವನ್ನು ಕೈಬಿಡಬೇಕೆಂದು ಸಿಐಟಿಯು ನೇತೃತ್ವದ ತಾಲ್ಲೂಕು ಅಂಗನವಾಡಿ ಕಾರ್ಯಕರ್ತರು ಶಾಸಕರಲ್ಲಿ ಮನವಿ ಮಾಡಿದೆ.

ನಗರದ ನೆಹರೂ ವೃತ್ತದಿಂದ ಚಿತ್ರದುರ್ಗ ರಸ್ತೆಯ ಶಾಸಕರ ಭವನದತ್ತ ಮೆರವಣಿಗೆಯಲ್ಲಿ ಆಗಮಿಸಿದ ನೂರಾರು ಅಂಗನವಾಡಿ ಕಾರ್ಯಕರ್ತೆಯರು ಸರ್ಕಾರ ಈ ಹೊಸ ನೀತಿಯಿಂದ ಗ್ರಾಮೀಣ ಭಾಗಗಳ ಮುಗ್ದ ಮಕ್ಕಳು ಶಿಕ್ಷಣ ಹಾಗೂ ಇತರೆ ಸೌಲಭ್ಯಗಳಿಂದ ವಂಚಿತರಾಗುತ್ತಿದ್ದಾರೆ. ಅಂಗನವಾಡಿ ಕೇಂದ್ರಗಳಿಗೆ ಮಕ್ಕಳ ದಾಖಲಾತಿಯೇ ಆಧಾರ. ಆದ್ದರಿಂದ



ಸರ್ಕಾರ ಎಲ್‌ಕೆಜಿ, ಯುಕೆಜಿ ತರವತಿಯನ್ನು ಶಾಲೆಗಳಲ್ಲಿ ಆರಂಭಿಸುವ ಪ್ರಯತ್ನವನ್ನು ಕೈಬಿಡಬೇಕೆಂದು ಸಿಐಟಿಯುಸಿ ತಾಲ್ಲೂಕು ಅಧ್ಯಕ್ಷ ಟಿ.ನಿಂಗಣ್ಣ ಒತ್ತಾಯಿಸಿದ್ಧಾರೆ.

ಜಿಲ್ಲಾ ಸಂಚಾಲಕ ಟಿ.ತಿಪ್ಪೇಸ್ವಾಮಿ ಮಾಹಿತಿ ನೀಡಿ, ಕಳೆದ ಸುಮಾರು 30 ವರ್ಷಗಳಿಂದ ಅಂಗನವಾಡಿ ಕೇಂದ್ರಗಳ ಬದಲಾವಣೆಗಾಗಿ ಸರ್ಕಾರ ನಿರಂತರ ಪ್ರಯತ್ನ ಮಾಡುತ್ತಾ ಬಂದಿದೆ. ಪ್ರತಿಯೊಂದು ಅಂಗನವಾಡಿ ಕೇಂದ್ರದಲ್ಲಿ ವಿದ್ಯಾರ್ಥಿಗಳಿಗೆ ಅಗತ್ಯ ಎಲ್ಲಾ ಸೌಲಭ್ಯ ಒದಗಿಸಲಾಗುತ್ತಿದೆ.ಸರ್ಕಾರಿಶಾಲೆಗಳಲ್ಲಿಎಲ್‌ಕೆಜಿ, ಯುಕೆಜಿ ಆರಂಭವಾದರೆ ಮಕ್ಕಳಿಗೆ ಗುಣಾತ್ಮಕ ಶಿಕ್ಷಣ ಸಿಗುವುದು ಸಾಧ್ಯವಾಗದು, ಸಾವಿರಾರು ಅಂಗನವಾಡಿ ಶಿಕ್ಷಕರು ಹಾಗೂ ಸಹಾಯಕಿಯರ ಬದುಕು ಬೀದಿಗೆ ಬರಲಿದೆ. ರಾಜ್ಯ ಸರ್ಕಾರ ಕೂಡಲೇ ಗ್ರಾಮೀಣ ಭಾಗಗಳಲ್ಲಿ ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸಬೇಕಾದರೆ,

ಪುಟ ↘ 2

## ಸಾಮೂಹಿಕ ಪ್ರಾರ್ಥನೆಯಲ್ಲಿ ಪಾಲ್ಗೊಂಡಿದ್ದ ಮುಸ್ಲಿಂ ಬಾಂಧವರು



» ಚಿತ್ರದುರ್ಗ

ತ್ಯಾಗ ಬಲಿದಾನಗಳ ಸಂಕೇತ ಬಕ್ರಿದ್ ಹಬ್ಬದ ಪ್ರಯುಕ್ತ ಚಂದ್ರವಳ್ಳಿ ಮೈದಾನ ಹಾಗೂ ದಾವಣಗೆರೆ ರಸ್ತೆಯಲ್ಲಿರುವ ಈದ್ಗಾ ಮೈದಾನದಲ್ಲಿ ಮುಸ್ಲಿಂ ಬಾಂಧವರು ಸೋಮವಾರ ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು.ಶ್ವೇತ ವಸ್ತ್ರದಾರಿಗಳಾಗಿದ್ದ ಮುಸ್ಲಿಂರು ತಲೆಗೆ ಬಿಳಿ ಟೋಪಿ ಧರಿಸಿ ಪ್ರಾರ್ಥನೆಯಲ್ಲಿ ತೊಡಗಿದ್ದರು.ಕೆಲವರು ಮನೆಯಿಂದ ಚಾಪೆ, ಜಮಖಾನ ತಂದು ನೆಲದಲ್ಲಿ ಹಾಸಿಕೊಂಡು ಅಲ್ಲಾನನ್ನು ಪ್ರಾರ್ಥಿಸಿದರು. ಚಂದ್ರವಳ್ಳಿ ಫೈರಿಂಗ್ ರೇಂಜ್ ಮೈದಾನದಲ್ಲಿ ನಡೆದ ಸಾಮೂಹಿಕ ಪ್ರಾರ್ಥನೆಯಲ್ಲಿ ಚಿತ್ರದುರ್ಗ ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಆರ್.ಕೆ.ಸರ್ದಾರ್, ಇಲಾಹಿಮುನ್ನ, ಮೆಹಬೂಬ್‌ಖಾನ್, ಅಯೂಬ್, ರಿಜ್ವಾನ್, ಇರ್ಫಾನ್, ಎಜಾಜ್, ಅಶ್ವಾಖ್, ವಿಖಾರ್, ನಾಸಿರ್, ಗೌಸ್‌ಪೀರ್ ಇನ್ನು ಅನೇಕರು ಪ್ರಾರ್ಥನೆ ಸಲ್ಲಿಸಿದರು.

ಪುಟ ↘ 2

## ಪ್ರಮುಖ ಸುದ್ದಿ

# ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ಆಕ್ರೋಶ: ಪ್ರತಿಭಟನೆ

» ಚಿತ್ರದುರ್ಗ

ರಾಜ್ಯ ಸರ್ಕಾರ ತನ್ನ ಗ್ಯಾರೆಂಟಿಗಳಿಗೆ ಹಣವನ್ನು ಹೊಂದಿಸುವ ಸಲುವಾಗಿ ಜನತೆ ಬಳಸುವ ಅಗತ್ಯ ವಸ್ತುಗಳ ಬೆಲೆಯನ್ನು ಏರಿಸುವುದರ ಮೂಲಕ ಬರೆಯನ್ನು ಎಳೆದಿದೆ ಎಂದು ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ಎಸ್ಸಿ ಮೋರ್ಚ ರಾಜ್ಯ ಪ್ರಧಾನ ಕಾರ್ಯದರ್ಶಿ ಉಮೇಶ್ ಕಾರಜೋಳ ವಾಗ್ದಾಳಿ ನಡೆಸಿದರು.

ನಗರದ ಒನಕೆ ಓಬವ್ವ ವೃತ್ತದಲ್ಲಿ ಸೋಮವಾರ ಪ್ರತಿಭಟನೆ ನಡೆಸಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ರಾಜ್ಯ ಸರ್ಕಾರ ಅಧಿಕಾರಕ್ಕೆ ಬಂದು ಒಂದು ವರ್ಷದ ಸವಿನೆನಪಿಗಾಗಿ ತನ್ನ ಮತದಾರರಿಗೆ ಡಿಸೆಲ್, ಪೆಟ್ರೋಲ್ ಬೆಲೆಯನ್ನು ಏರಿಸುವುದರ ಮೂಲಕ ಕೊಡುಗೆಯಾಗಿ ನೀಡಿದೆ, ಇದರ ವಿರುದ್ಧ ಜನತೆ ಬಂಡೇಳ ಬೇಕಿದೆ, ಸರ್ಕಾರ ಏರಿಸಿರುವ ಬೆಲೆಯನ್ನು ಇಳಿಸುವವರೆಗೂ ಬಿಜೆಪಿ ಹೋರಾಟವನ್ನು ನಡೆಸಲಿದೆ ಎಂದರು.

ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಂಪತ್ ಕುಮಾರ್ ಮಾತನಾಡಿ, ವಿಧಾನಸಭೆ ಚುನಾವಣೆ ಪೂರ್ವದಲ್ಲಿಯೇ




ಐದು ಉಚಿತ ಗ್ಯಾರೆಂಟಿಗಳನ್ನು ಘೋಷಿಸಿ ರಾಜ್ಯದ ಜನತೆಯನ್ನು ಮರಳು ಮಾಡಿ ಅಧಿಕಾರಕ್ಕೆ ಬಂದಿರುವ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಗ್ಯಾರೆಂಟಿಗಳನ್ನು ನೀಡಲು ಹಣವಿಲ್ಲದೆ ಪೆಟ್ರೋಲ್–ಡೀಸೆಲ್ ಬೆಲೆಗಳನ್ನು ಹೆಚ್ಚಿಸಿ ಬಡವರ ಮೇಲೆ ಹೊರೆ ಹೇರಿದ್ದಾರೆ. ಸ್ಟಾಂಪ್ ಡ್ಯೂಟಿ ಜಾಸ್ತಿಯಾಗಿದೆ. ಮದ್ಯದ ಬೆಲೆ ದುಬಾರಿಯಾಗಿದೆ. ಬಡವರ, ರೈತ ವಿರೋಧಿ ಕಾಂಗ್ರೆಸ್ ಸರ್ಕಾರ ಬೆಲೆ ಏರಿಕೆಯನ್ನು ಹಿಂದಕ್ಕೆ ಪಡೆಯದಿದ್ದರೆ ರಾಜ್ಯಾದ್ಯಂತ ಉಗ್ರ ಹೋರಾಟ ನಡೆಸಲಾಗುವುದೆಂದು ಎಚ್ಚರಿಸಿದರು.

ಪೆಟ್ರೋಲ್–ಡೀಸೆಲ್ ಬೆಲೆ ಹೆಚ್ಚಳದಿಂದ ಪ್ರಯಾಣ ದರ ಸೇರಿದಂತೆ ಸಾಗಾಣಿಕೆ ವೆಚ್ಚ ಏರಿಕೆಯಾಗುತ್ತದೆ. ಓಟಿಗಾಗಿ ಗ್ಯಾರೆಂಟಿ ಯೋಜನೆಗಳನ್ನು ನೀಡಿರುವ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಈಗ ಹೆಣಗಾಡುತ್ತಿದ್ದಾರೆ. ಸಮಾಜಕ್ಕೆ ಕಂಟಕವಾಗಿರುವ ಈ ಸರ್ಕಾರ ಬೇಕಿಲ್ಲ. ತಕ್ಷಣವೇ ಬೆಲೆ ಏರಿಕೆ ಹಿಂದಕ್ಕೆ ಪಡೆಯಬೇಕೆಂದು ಆಗ್ರಹಿಸಿದರು.

ರೈತ ಮೋರ್ಚಾ ಜಿಲ್ಲಾಧ್ಯಕ್ಷ ವೆಂಕಟೇಶ್ ಯಾದವ್ ಮಾತನಾಡಿ, ರಾಜ್ಯ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ಒಂದು ವರ್ಷ ಪೂರೈಸಿ ಸಂಭ್ರಮಾಚರಣೆಯಲ್ಲಿರುವ ಇದರ ಬೆನ್ನಲ್ಲೆ ಸ್ಟಾಂಪ್ ಡ್ಯೂಟಿ, ಮದ್ಯದ ಬೆಲೆ ಹೆಚ್ಚಿಸಿ ಬಡವರಿಗೆ ಬರೆ ಎಳೆದಿದೆ. ಬಿಟ್ಟಿ ಭಾಗ್ಯಗಳನ್ನು ಘೋಷಿಸಿ ಅಧಿಕಾರಕ್ಕೆ ಬಂದಿರುವ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸರ್ಕಾರದಲ್ಲಿ ಬೊಕ್ಕಸ ಖಾಲಿಯಾಗಿದ್ದರೂ. ಸುಮ್ಮನೆ ಶೋ ಕೊಡುತ್ತಿದ್ದಾರೆ. ಡೀಸೆಲ್ 3.50 ರೂ. ಪೆಟ್ರೋಲ್ ಲೀಟರ್‌ಗೆ ಮೂರು ರೂ.ಗಳನ್ನು ಜಾಸ್ತಿ ಮಾಡಿ. ಬಡವರು, ಶ್ರೀಸಾಮಾನ್ಯನ ಜೇಬಿಗೆ ಕತ್ತರಿ ಹಾಕಿದೆ. ರೈತರಿಗೆ ಬೀಜ, ರಸಗೊಬ್ಬರಗಳ ಕೊರತೆಯಿದೆ. ಕಾನೂನು ಸುವ್ಯವಸ್ಥೆ ಹದಗೆಟ್ಟಿದ್ದು, ಸರಣಿ ಕೊಲೆಗಳು ನಡೆಯುತ್ತಿವೆ. ರಾಜ್ಯ ಸರ್ಕಾರ ಬೆಲೆ ಏರಿಕೆಯನ್ನು ಹಿಂದಕ್ಕೆ ಪಡೆಯದಿದ್ದರೆ ರಾಜ್ಯಾದ್ಯಂತ ಉಗ್ರ ಹೋರಾಟಕ್ಕೆ ಇಳಿಯಬೇಕಾಗುತ್ತದೆಂದು ಎಚ್ಚರಿಸಿದರು.

ಬಿಜೆಪಿ ರೈತ ಮೋರ್ಚ ರಾಜ್ಯ ಕಾರ್ಯದರ್ಶಿ ಮಲ್ಲಿಕಾರ್ಜುನ್, ಮಾಧ್ಯಮ ವಕ್ತಾರ ದಗ್ಗೆ ಶಿವಪ್ರಕಾಶ್, ವಕ್ತಾರ ನಾಗರಾಜ್ ಬೇದ್ರೆ, ನಗರ ಮಂಡಲ ಅಧ್ಯಕ್ಷ ನವೀನ್ ಚಾಲುಕ್ಯ, ಗ್ರಾಮಾಂತರ ಮಂಡಲ ಅಧ್ಯಕ್ಷ ಕಲ್ಲೇಶಯ್ಯ, ನಾಗರಾಜ್ ಸಂಗಮ್, ಮಹಿಳಾ ಮೋರ್ಚ ಜಿಲ್ಲಾಧ್ಯಕ್ಷೆ ಶೈಲಜಾರೆಡ್ಡಿ, ಉಪಾಧ್ಯಕ್ಷೆ ಶ್ಯಾಮಲ ಶಿವಪ್ರಕಾಶ್, ಬಸಮ್ಮ, ವೀಣ, ಕವನ, ರಜಿನಿ, ಕಿರಣ್, ಆದರ್ಶ, ವೀರೇಶ್, ಅಭಿಲಾಷ್ ಇನ್ನು ಅನೇಕರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

## ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

## ಫಾಸ್ಟ್ ನ್ಯೂಸ್

### ಮಾದಿಗ ಸಮುದಾಯದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

» ಚಿತ್ರದುರ್ಗ

ಶ್ರೀ ಎಚ್.ಆಂಜನೇಯಚಾರಿಟಬಲ್ ಟ್ರಸ್ಟ್ ವತಿಯಿಂದ ಮಾದಿಗ ಸಮುದಾಯದಎಸ್ಸೆಸ್ಸೆಲ್ಸಿ, ಪಿಯುಸಿ ಪ್ರತಿಭಾವಂತರಿಗೆ ಪ್ರತಿಭಾ ಪುರಸ್ಕಾರ ನೀಡಲುಅರ್ಜಿಆಹ್ವಾನಿಸಲಾಗಿದೆ.ಎಸ್ಸೆಸ್ಸೆಲ್ಸಿ, ಪಿಯುಸಿಯಲ್ಲಿ ಶೇ.85ಕ್ಕಿಂತ ಹೆಚ್ಚು ಅಂಕ ಗಳಿಸಿದ ಮಾದಿಗ ಸಮುದಾಯದ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದು. ಚಿತ್ರದುರ್ಗಜಿಲ್ಲೆಯ ನಿವಾಸಿ ಆಗಿರಬೇಕು, ಚಿತ್ರದುರ್ಗಜಿಲ್ಲೆಯ ಶಾಲಾ–ಕಾಲೇಜ್ ಗಳಲ್ಲಿ ಓದಿರಬೇಕು. ಪ್ರತಿಭಾ ಪುರಸ್ಕಾರಕ್ಕೆ ಆಯ್ಕೆಯಾಗುವ ವಿದ್ಯಾರ್ಥಿಗಳಿಗೆ ಆಕರ್ಷಕ ಫಲಕ, ಶಾಲು, ಹಾರ, ಸನ್ಮಾನ ಪತ್ರದಜೊತೆಗೆ ಪ್ರೋತ್ಸಾಹಧನ ನೀಡಿಗೌರವಿಸಲಾಗುವುದು. ಸಮಾರಂಭದ ದಿನಾಂಕ ಹಾಗೂ ಸ್ಥಳವನ್ನು ಆಯ್ಕೆ ಪ್ರಕ್ರಿಯೆಪೂರ್ಣಗೊಂಡನಂತರತಿಳಿಸಲಾಗುವುದು. ಸ್ವವಿವರದಜೊತೆ ಪಾಸ್ ಫೋಟೋ, ಅಂಕಪಟ್ಟಿ, ಜಾತಿ ಪ್ರಮಾಣ ಪತ್ರದ ನಕಲು ಪ್ರತಿಯೊಂದಿಗೆಅರ್ಜಿ ಸಲ್ಲಿಸಬೇಕು. ಆಸ್ಕರ್ ಫರ್ನಾಂಡೀಸ್ ಸ್ಕೂಲ್, ಐಯುಡಿಪಿ ಲೇಔಟ್, ಚಿತ್ರದುರ್ಗ–577501 ಅಥವಾ hanjaneyacharitabletrust@gmail.com ಇಲ್ಲಿಗೆಅರ್ಜಿ ಸಲ್ಲಿಸಬಹುದು. ಹೆಚ್ಚಿನ ವಿವರಗಳಿಗೆ ಅಥವಾ ವಾಟ್ಸಾಪ್ ನಂ: 9743048006 ಅಥವಾ 8073050019 ಸಂಪರ್ಕಿಸಬಹುದು.

### ಸರ್ಕಾರಿ ಪೌಢಶಾಲೆ ವಿದ್ಯಾರ್ಥಿಗಳಿಗೆ 2 ಕೋಟಿ ವಿದ್ಯಾರ್ಥಿ ವೇತನದತ್ತ ದಾಪುಗಾಲು

» ಹೊಸದುರ್ಗ

8ನೇ ತರಗತಿಗೆ ಕೇಂದ್ರಸರ್ಕಾರನಡೆಸುವರಾಷ್ಟ್ರೀಯ ಪ್ರತಿಭಾನ್ವೇಷಣೆ ಪರೀಕ್ಷೆಯಲ್ಲಿ ರಾಜ್ಯದಲ್ಲಿಯೇ 47 ಕ್ಕೂ ಅತಿ ಹೆಚ್ಚು ವಿದ್ಯಾರ್ಥಿಗಳು ಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರೌಢಶಾಲಾ ವಿಭಾಗಯೊಂದರಲ್ಲಿ ಆಯ್ಕೆಯಾಗುವ ಮೂಲಕ ಹೊಸದುರ್ಗಕ್ಕೆ ಕೀರ್ತಿಯನ್ನು ತಂದಿರುತ್ತಾರೆ ಎಂದು ಕ್ಷೇತ್ರಶಿಕ್ಷಣಾಧಿಕಾರಿ ಸೈಯದ್ ಮೋಸಿನ್ ತಿಳಿಸಿದ್ದಾರೆ. ಕಳೆದ ವರ್ಷ ಈ ಶಾಲೆಯಲ್ಲಿ 40 ವಿದ್ಯಾರ್ಥಿಗಳು ಆಯ್ಕೆಯಾಗಿರುವುದನ್ನು ಇಲ್ಲಿ ಸ್ಮರಿಸಬಹುದಾಗಿದೆ. ಈ ಪರೀಕ್ಷೆಯಲ್ಲಿ ಆಯ್ಕೆಯಾದವರಿಗೆ ವರ್ಷಕ್ಕೆ 12,000 ರೂ.ನಂತೆ 4 ವರ್ಷಗಳ ಕಾಲ 48,000ರೂ ವಿದ್ಯಾರ್ಥಿ ವೇತನ ಸಿಗುತ್ತದೆ. ಈ ಸಾಧನೆ ಹಿಂದೆ ಶಿಕ್ಷಕ ಆರ್.ಶಿವಶಂಕರ್ ಪ್ರಯತ್ನ ಎದ್ದು ಕಾಣುತ್ತದೆ. ವೃತ್ತಿಯಲ್ಲಿ ಆಂಗ್ಲ ಶಿಕ್ಷಕರಾದರೂ ಗಣಿತದಲ್ಲಿ ಎತ್ತಿದ ಕೈ. 2013– 14 ರಿಂದ ಪ್ರಾರಂಭವಾದ ಇವರ ತರಬೇತಿ ಇಲ್ಲಿಯವರೆಗೆ ಸುಮಾರು 2.ಕೋಟಿ ವಿದ್ಯಾರ್ಥಿ ವೇತನ ಮಕ್ಕಳಿಗೆ ಸಿಗುವಂತೆ ಮಾಡಿದ್ದಾರೆ. ಯಾವುದೇ ಫಲಾಪೇಕ್ಷೆ ನಿರೀಕ್ಷಿಸದೆ ಮಾಡಿದ ಉಚಿತ ತರಬೇತಿಗೆ 400ಕ್ಕೂ ಹೆಚ್ಚು ಕುಟುಂಬಗಳಿಗೆ ಆರ್ಥಿಕವಾಗಿ ಅನುಕೂಲವಾಗಿದೆ. ಕಳೆದ 11 ವರ್ಷಗಳಿಂದಲೂ ಈ ಶಾಲೆಯ ವಿದ್ಯಾರ್ಥಿಗಳೇ ಜಿಲ್ಲಾ ಟಾಪರ್ ಆಗಿರುವುದು ವಿಶೇಷವಾಗಿದೆ.ಪ್ರಸಕ್ತ ವರ್ಷದ ಸಾಲಿನಲ್ಲಿ ಭಾವನ. ಆರ್ : 117 ಅಂಕಗಳನ್ನು ಗಳಿಸುವ ಮೂಲಕ ಭಾವನ ಆರ್, ಜಿಲ್ಲಾ ಟಾಪರ್ ಆಗಿ ಹೊರ ಹೊಮ್ಮಿದ್ದಾಳೆ. ತಾಲ್ಲೂಕಿನ ಕ್ಷೇತ್ರಶಿಕ್ಷಣಾಧಿಕಾರಿ ಸೈಯದ್ ಮೋಸಿನ್ ಶಿಕ್ಷಕರನ್ನು ಮತ್ತು ಮಕ್ಕಳನ್ನು ಅಭಿನಂದಿಸಿದ್ದಾರೆ. ಜೊತೆಗೆ ಉಪ ಪ್ರಾಂಶುಪಾಲರಾದ ನಾಗೇಂದ್ರಪ್ಪ, ವಿಶ್ರಾಂತ ನ್ಯಾಯಾಧೀಶರಾದ ಬಿಲ್ಲಪ್ಪ ಹಾಗೂ ಎಸ್ ಡಿ ಎಂ ಸಿ ಅಧ್ಯಕ್ಷ ಮಂಜುನಾಥ್ ಸೇರಿದಂತೆ ಸದಸ್ಯರು, ಶಾಲಾ ಶಿಕ್ಷಕರು ಮತ್ತು ಸಾರ್ವಜನಿಕರು ಮಕ್ಕಳನ್ನು ಅಭಿನಂದಿಸಿದ್ದಾರೆ. ಜಿಲ್ಲೆಯಲ್ಲಿ ಹೊಸದುರ್ಗ– 70, ಹೊಳಲ್ಕೆರೆ– 25, ಚಿತ್ರದುರ್ಗ– 22, ಚಳ್ಳಕೆರೆ– 22, ಹಿರಿಯೂರು– 19 ಹಾಗೂ ಮೊಳಕಾಲ್ಮೂರಿನಲ್ಲಿ 12 ವಿದ್ಯಾರ್ಥಿಗಳು ಎನ್‌ಎಂಎಂಎಸ್ ಪರೀಕ್ಷೆಯಲ್ಲಿ ಆಯ್ಕೆಯಾಗಿದ್ದಾರೆ.

## ಫಾಸ್ಟ್ ನ್ಯೂಸ್

### ಅಂಗನವಾಡಿ ನೌಕರರ ಪ್ರತಿಭಟನೆ

» ಮೊದಲ ಪುಟದಿಂದ

ಮಕ್ಕಳ ದಾಖಲಾತಿ ಅಗತ್ಯವಿದ್ದು ಅಲ್ಲೇ ಮುಂದುವರೆಸುವಂತೆ ಮನವಿ ಮಾಡಿದ್ದಾರೆ.

ಮನವಿ ಸ್ವೀಕರಿಸಿ ಮಾತನಾಡಿದ ಶಾಸಕ ಟಿ.ರಘುಮೂರ್ತಿ, ರಾಜ್ಯಾಧ್ಯಂತ ಸಿಐಟಿಯು ನೇತೃತ್ವದ ಕಾರ್ಮಿಕ ಸಂಘಟನೆ ಅಂಗನವಾಡಿ ನೌಕರರ ಸಂಘದ ಆಶ್ರಯದಲ್ಲಿ ಹೋರಾಟ ನಡೆಸುತ್ತಿದೆ. ತಮ್ಮ ಹೋರಾಟದ ಬಗ್ಗೆ ನನಗೂ ಸಾಕಷ್ಟು ಮಾಹಿತಿ ಇದೆ. ತಮ್ಮ ಮನವಿಯನ್ನು ಪುರಸ್ಕರಿಸುವಂತೆ ಪತ್ರದ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಮಾಡಲಾಗುವುದು ಎಂದರು. ಖಜಾಂಚಿ ಎಚ್.ಓ.ನಾಗರಾಜು, ಅಧ್ಯಕ್ಷೆ ಇಂದಿರಮ್ಮ, ಖಜಾಂಚಿ ಜೆ.ಎನ್.ಗಂಗಮ್ಮ, ಪುಟ್ಟಮ್ಮ, ಮಂಜಮ್ಮ, ಗಂಗಮ್ಮ, ಕರಿಬಸಮ್ಮ, ಜಯಲಕ್ಷ್ಮಿ ಮುಂತಾದವರು ಉಪಸ್ಥಿತರಿದ್ದರು.

### ಸಾಮೂಹಿಕ ಪ್ರಾರ್ಥನೆಯಲ್ಲಿ ಪಾಲ್ಗೊಂಡಿದ್ದ ಮುಸ್ಲಿಂ ಬಾಂಧವರು

» ಮೊದಲ ಪುಟದಿಂದ

ಈದ್ಗಾ ಮೈದಾನದಲ್ಲಿ ನಡೆದ ಪ್ರಾರ್ಥನೆಯಲ್ಲಿ ಕರ್ನಾಟಕ ರಾಜ್ಯ ಟಿಪ್ಪುಸುಲ್ತಾನ್ ಅಭಿಮಾನಿಗಳ ಮಹಾವೇದಿಕೆ ರಾಜ್ಯಾಧ್ಯಕ್ಷ ಟಿಪ್ಪುಖಾಸಿಂ ಆಲಿ, ಚಿತ್ರದುರ್ಗ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎಂ.ಕೆ.ತಾಜ್‌ಪೀರ್, ಎ.ಜಾಕಿರ್‌ಹುಸೇನ್, ಚಾಂದ್‌ಪೀರ್ ಸೇರಿದಂತೆ ನೂರಾರು ಮುಸ್ಲಿಂ ಬಾಂಧವರು ಪ್ರಾರ್ಥನೆಯಲ್ಲಿ ತೊಡಗಿದ್ದರು.ಪ್ರಾರ್ಥನೆಯ ನಂತರ ಪರಸ್ಪರರು ಅಪ್ಪಿಕೊಂಡು ಬಕ್ರಿದ್ ಹಬ್ಬದ ಶುಭಾಷಯಗಳನ್ನು ವಿನಿಮಯ ಮಾಡಿಕೊಂಡರು.ದಾವಣಗೆರೆ ರಸ್ತೆಯಲ್ಲಿ ಬ್ಯಾರಿಕೇಡ್‌ಗಳನ್ನು ಅಡ್ಡವಿಟ್ಟು ಪೊಲೀಸರು ಸಂಚಾರವನ್ನು ನಿಯಂತ್ರಿಸುತ್ತಿದ್ದರು.

### ಹೊಸದುರ್ಗ: ಬಸವೇಶ್ವರ ಆಸ್ಪತ್ರೆಯಲ್ಲಿ ಪೌರಕಾರ್ಮಿಕರಿಗೆ ಮಾಸ್ಟರ್ ಹೆಲ್ತ್ ಚೆಕಪ್ಪ್



» ಹೊಸದುರ್ಗ

ಪಟ್ಟಣದಲ್ಲಿ 23 ವಾರ್ಡ್‌ಗಳಿದ್ದು ಸಮರ್ಪಕ ಸ್ವಚ್ಛತೆಗಾಗಿ ಶ್ರಮಿಸುವ ಪೌರಕಾರ್ಮಿಕರು ಸ್ವಚ್ಛತಾ ಕಾರ್ಮಿಕರು, ಲೋಡರ್ಸ್, ಕ್ಲೀನರ್ಸ್ ಮತ್ತು ವಾಹನ ಚಾಲಕರು ಸೇರಿ ಒಟ್ಟು 69 ಜನ ಖಾಯಂ ಹಾಗೂ ಹೊರಗುತ್ತಿಗೆಯಡಿಕಾರ್ಯನಿರ್ವಹಿಸುತ್ತಿದ್ದು ಇವರ ಆರೋಗ್ಯ ಕಾಪಾಡುವ ದೃಷ್ಠಿಯಿಂದ ವರ್ಷಕ್ಕೊಮ್ಮೆ ಮಾಸ್ಟರ್ ಹೆಲ್ತ್ ಚೆಕಪ್ ಹಾಗೂ 3 ತಿಂಗಳಿಗೊಮ್ಮೆ ಸಾಮಾನ್ಯ ಆರೋಗ್ಯ ತಪಾಸಣೆ ಕೈಗೊಳ್ಳುವ ಸಲುವಾಗಿ ಹೆಲ್ತ್ ಚೆಕಪ್‌ಗೆ ಚಿತ್ರದುರ್ಗದ ಬಸವೇಶ್ವರ ಆಸ್ಪತ್ರೆಗೆ ಕಳುಹಿಸಿ ಕೊಡಲಾಯಿತು ಎಂದು ಪುರಸಭಾ ಮುಖ್ಯಾಧಿಕಾರಿ ತಿಮ್ಮರಾಜು ಜಿ.ವಿ.ತಿಳಿಸಿದರು.ಪಟ್ಟಣದ ಪುರಸಭಾ ಆವರಣದಲ್ಲಿ 69 ಜನ ಖಾಯಂ ಹಾಗೂ ಹೊರಗುತ್ತಿಗೆಯಡಿ ನೌಕರರನ್ನ ಬೀಳ್ಕೊಟ್ಟು ನಂತರ ಸುದ್ದಿಗಾರರೊಂದಿಗೆ ಮಾತನಾಡಿದರು.ಶೇ.24.10% ಅನುದಾನದಡಿ ಬಸವೇಶ್ವರ ಆಸ್ಪತ್ರೆ ಹಾಗೂ ಸಂಶೋದನಾ ಕೇಂದ್ರ ಚಿತ್ರದುರ್ಗ ಇಲ್ಲಿ ರಕ್ತ, ಯೂರಿನ್ ಪರೀಕ್ಷೆ, ಬಿ ಪಿ, ಶುಗರ್, ಇಕೋ, ಇ.ಸಿ.ಜಿ, ಕಣ್ಣಿನ ಪರೀಕ್ಷೆ ಇತರೆ ಪರೀಕ್ಷೆಗಳನ್ನು ಒಳಗೊಂಡಂತೆ ಮಾಸ್ಟರ್ ಹೆಲ್ತ್ ಚೆಕಪ್ ಹಾಗೂ ಉತ್ತಮ ಮತ್ತು ಸದೃಡ ಆರೋಗ್ಯ ತಪಾಸಣೆಗೆ ಕಳುಹಿಸಿ ಕೊಡಲಾಗಿದೆ ಎಂದರು. ಈ ಸಂದರ್ಭದಲ್ಲಿ ಆರೋಗ್ಯ ನಿರೀಕ್ಷರಾದ ಬಸವರಾಜ, ಸಿಬ್ಬಂದಿಗಳಾದ ನೇಮಿಕಾಂತ್, ಹನುಮಂತಪ್ಪ, ಕುಮಾರ, ವಿಕಾಸ್.ಹೆಚ್, ರಾಜೇಶ್, ಹಾಜರಿದ್ದರು.

### ಸರ್ಕಾರಿ ಶಾಲೆಯಲ್ಲಿ ಪರಿಸರ ದಿನಾಚರಣೆ

» ಹೊಸದುರ್ಗ

ಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜು ಪ್ರೌಢಶಾಲೆ ವಿಭಾಗದ ವತಿಯಿಂದ ವಿಶ್ವ ಪರಿಸರ ದಿನಾಚರಣೆಯನ್ನುಶಾಲಾಮೈದಾನದಲ್ಲಿಗಿಡಗಳನ್ನು ಹಾಕುವುದರ ಮೂಲಕ ಆಚರಿಸಲಾಯಿತು ಕಾರ್ಯಕ್ರಮದಲ್ಲಿ ಎಸ್‌ಡಿಎಂಸಿ ಅಧ್ಯಕ್ಷ ಮಂಜುನಾಥ್ ಉಪಪ್ರಾಂಶುಪಾಲ ನಾಗೇಂದ್ರಪ್ಪ ಸೇರಿದಂತೆ ಎಲ್ಲ ಶಿಕ್ಷಕರು ಭಾಗವಹಿಸಿದ್ದರು. ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ಪರಿಸರ ಜಾಗೃತಿ ಮತ್ತು ಪರಿಸರ ಸಂರಕ್ಷಣೆ ಭೂ ಮಾಲಿನ್ಯ, ಜಲಮಾಲಿನ್ಯ ವಾಯುಮಾಲಿನ್ಯ, ಶಬ್ದ ಮಾಲಿನ್ಯ ಇವುಗಳನ್ನು ತಡೆಗಟ್ಟಿ ಪರಿಸರದಲ್ಲಿ ಹೆಚ್ಚು ಗಿಡಗಳನ್ನು ಬೆಳೆಸಿದರೆ ಪರಿಸರದ ಸಮತೂಲವನ್ನು ಕಾಪಾಡಬೇಕು ಎಂಬ ಮಾಹಿತಿ ನೀಡುವುದರ ಜೋತೆಗೆ ಪರಿಸರ ಸಂರಕ್ಷಣೆ ಯನ್ನು ವರ್ಷವಿಡಿ ಆಚರಿಸುವ ಬಗ್ಗೆ ಬಗ್ಗೆ ವಿದ್ಯಾರ್ಥಿಗಳಿಗೆ ತಿಳಿಸಲಾಯಿತು.

# ಪರಿಷತ್‌ನಲ್ಲಿ ಪಕ್ಷಕ್ಕೆ ಬಲ ಬಂದಿದೆ: ಶ್ರೀನಿವಾಸ್

» ಚಿತ್ರದುರ್ಗ

ಆಗ್ನೇಯ ಶಿಕ್ಷಕರ ಕ್ಷೇತ್ರದಲ್ಲಿ ಕಾಂಗ್ರೆಸ್ ಪಕ್ಷ ಗೆಲುವನ್ನು ಕಂಡಿರಲಿಲ್ಲ. ಈಗ ಪಕ್ಷದ ಕಾರ್ಯಕರ್ತರು, ಮುಖಂಡರು, ಮತದಾರರು ಕೈ ಹಿಡಿದಿರುವುದರಿಂದ ನನ್ನ ಗೆಲುವು ಕಂಡಿದೆ. ನಮ್ಮ ಪಕ್ಷದಲ್ಲಿ ಸೋಲನ್ನು ಕಂಡರೇ ಅದು ನಮ್ಮ ಪಕ್ಷದವರಿಂದಲೇ ಆಗುತ್ತದೆ ಎಂದು ಆಗ್ನೇಯ ಶಿಕ್ಷಕರ ಕ್ಷೇತ್ರದ ನೂತನ ಸದಸ್ಯ ಡಿ.ಟಿ.ಶ್ರೀನಿವಾಸ್ ತಿಳಿಸಿದರು.



ಚಿತ್ರದುರ್ಗ ನಗರದ ಕಾಂಗ್ರೆಸ್ ಕಚೇರಿಗೆ ನೂತನ ಸದಸ್ಯರಾದ ಡಿ.ಟಿ.ಶ್ರೀನಿವಾಸ್ ಭೇಟಿ ನೀಡಿದ ಸಂದರ್ಭದಲ್ಲಿ ಪಕ್ಷದ ಮುಖಂಡರು, ಅಭಿಮಾನಿಗಳು ನೀಡಿದ ಸನ್ಮಾನವನ್ನು ಸ್ವೀಕಾರ ಮಾಡಿ ಮಾತನಾಡಿದರು.

ಕಾಂಗ್ರೆಸ್ ಪಕ್ಷ ವಿಧಾನ ಪರಿಷತ್ ಚುನಾವಣೆಯನ್ನು ಅಷ್ಟಾಗಿ ಗಂಭೀರವಾಗಿ ಪರಿಗಣಿಸಿರಲಿಲ್ಲ, ನಮ್ಮ ಸರ್ಕಾರ ಮಾಡಿದ ಕಾನೂನುಗಳುಪರಿಷತ್‌ನಲ್ಲಿಪಾಸಾಗಬೇಕು ಆದರೆ ಈಗ ಪರಿಷತ್‌ನಲ್ಲಿ ನಮ್ಮ ಪಕ್ಷದ ಬಲ ಕಡಿಮೆ ಇದ್ದು ಈ ಚುನಾವಣೆಯಿಂದ ಪರಿಷತ್‌ನಲ್ಲಿ ನಮ್ಮ ಬಲವನ್ನು ಹೆಚ್ಚಳ ಮಾಡುವುದು ಅಗತ್ಯವಾಗಿದೆ. ಇದರಿಂದ ಚುನಾವಣೆಯನ್ನು ಪಕ್ಷ ಗಂಭೀರವಾಗಿ ಪರಿಗಣಿಸಿದ್ದರಿಂದ ಈ ಚುನಾವಣೆಯಲ್ಲಿ ಗೆಲುವು ಸಾಧಿಸಲು ಸಾಧ್ಯವಾಯಿತೆಂದು ತಿಳಿಸಿದರು.

1952ರಿಂದ ಇಲ್ಲಿಯವರೆಗೂ ಆಗ್ನೇಯ ಶಿಕ್ಷಕರ ಕ್ಷೇತ್ರವನ್ನು ಕಾಂಗ್ರೆಸ್ ಪಕ್ಷ ಗೆಲುವುವನ್ನು ಕಂಡಿರಲಿಲ್ಲ, ನಾನು ಈ ಚುನಾವಣೆಗೆ ನಿಂತಾಗ ವಿರೋಧಿಗಳು ನನ್ನ ಬಗ್ಗೆ ಅಪಪ್ರಚಾರವನ್ನು ಮಾಡುವುದರ ಮೂಲಕ ನನ್ನ ಸೋಲಿಸಲು ಮುಂದಾಗಿದ್ದರು, ಜಾತಿವಾದಿ, ಅಹಿಂದ ಎಂದು ಮತದಾರರಲ್ಲಿ ಗೊಂದಲವನ್ನು ಮೂಡಿಸುವುದರ ಮೂಲಕ ಮತಗಳನ್ನು ಸೆಳೆಯುವ ಕಾರ್ಯವನ್ನು ಮಾಡಿದರು ಅದರೆ ಮತದಾರರು ಅದಕ್ಕೆ ಮ್ಮನಣೆಯನ್ನು ನೀಡದೆ ನನ್ನ ಗೆಲುವಿಗೆ ಸಹಕಾರ ನೀಡಿದ್ದಾರೆ.

ಕಾಂಗ್ರೆಸ್ ಪಕ್ಷ ಸಾಮಾಜಿಕ ನ್ಯಾಯವನ್ನು ನೀಡುವ ಪಕ್ಷವಾಗಿದೆ. ಸಣ್ಣ ಸಣ್ಣ ಸಮುದಾಯವನ್ನು ಗುರುತಿಸುವುದರ ಮೂಲಕ ರಾಜಕೀಯ ಸ್ಥಾನವನ್ನು ನೀಡಿದೆ. ಇಲ್ಲಿ ನನ್ನ ಮತ್ತು ನನ್ನ ಹೆಂಡತಿ ಮಧ್ಯೆ ತಂದಿಟ್ಟು ನಮ್ಮನ್ನು ಬೇರೆ ಮಾಡುವುದಕ್ಕೆ ನೋಡಿದರು. ನನಗೆ ಹುಳಿಯನ್ನು ಹಿಂಡಿ ಅಭ್ಯಾಸ ಇಲ್ಲ ಏನೇ ಇದ್ದರೂ ನೇರವಾಗಿ ಹೇಳುವ ಅಭ್ಯಾಸ ನನ್ನದು, ಈ ಕ್ಷೇತ್ರವನ್ನು ಗೆಲ್ಲಬೇಕಾದ ಅನಿವಾರ್ಯತೆ ಇತ್ತು ಈ ಹಿನ್ನಲೆಯಲ್ಲಿ ಎಲ್ಲರ ಸಹಕಾರ, ಸಹಾಯದಿಂದ ಗೆಲುವನ್ನು ಸಾಧಿಸಲಾಗಿದೆ ಎಂದು ಶ್ರೀನಿವಾಸ್ ತಿಳಿಸಿದರು.

ಶಿಕ್ಷಕರ ಕ್ಷೇತ್ರದಿಂದ ನನ್ನನು ಆಯ್ಕೆ ಮಾಡಲಾಗಿದೆ. ಶಿಕ್ಷಕರ ಸಮಸ್ಯೆ ಏನೇ ಇದ್ದರು ಸಹಾ ಅದನ್ನು ಬಗೆಹರಿಸುವ ಕಾರ್ಯವನ್ನು ಮಾಡಲಾಗುವುದು. ನನ್ನ ಜೊತೆಯಲ್ಲಿ ಪೂರ್ಣಿಮಾ, ಹಾಗೂ ಕೆಡಿಪಿ ಸದಸ್ಯರಾದ ನಾಗರಾಜ್ ರವರು ಜೊತೆಯಲ್ಲಿದ್ದಾರೆ. ಇವರ ಸಹಾಯದಿಂದ ಶಿಕ್ಷಕರ ಸಮಸ್ಯೆಗಳನ್ನು ಬಗೆಹರಿಸುವ ಕಾರ್ಯವನ್ನು ಮಾಡಲಾಗುವುದು. ಶಿಕ್ಷಕರ ಸಮಸ್ಯೆಯನ್ನು ಪರಿಹಾರ ಮಾಡುವಲ್ಲಿ ಪ್ರಮಾಣಿಕ ಪ್ರಯತ್ನವನ್ನು ಮಾಡಲಾಗುವುದು. ಶಿಕ್ಷಕರಿಗೆ ಧಕ್ಕೆಯನ್ನು ತರುವಂತ ಯಾವುದೇ ಕೆಲಸವನ್ನು ಮಾಡುವುದಿಲ್ಲ ಎಂದು ಶ್ರೀನಿವಾಸ್ ಭರವಸೆಯನ್ನು ನೀಡಿದರು.

ಶಿಕ್ಷಕರ ಸಮಸ್ಯೆಗಳಿಗೆ ಪರಿಹಾರ ಒದಗಿಸುವ ನಿಟ್ಟಿನಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ. ಈ ಗೆಲುವು ಕುತಂತ್ರ, ಕುಂತ್ರದಿಂದ ಬಂದಿದ್ದಲ್ಲ. ಸಂಘಟನೆ, ನೀತಿ-ನಿಯಮ, ಬಹುದಿನದ ಹೋರಾಟ, ಶಿಕ್ಷಕರ ಸಮಸ್ಯೆಗಳಿಗೆ ಉತ್ತರ ಸಿಗುವ ನಿಟ್ಟಿನಲ್ಲಿ ಕೊಟ್ಟಂತಹ ಗೆಲುವು. ಈ ಗೆಲುವಿಗೆ ಶ್ರಮಿಸಿದ ಎಲ್ಲರಿಗೂ ಕೃತಜ್ಞತೆ ಸಲ್ಲಿಸುವೆ ಎಂದರು.

ಶಾಸಕ ಕೆ.ಸಿ.ವಿರೇಂದ್ರ ಪಪ್ಪಿ ಮಾತನಾಡಿ, ಚಿತ್ರದುರ್ಗದಲ್ಲಿ ಕಳೆದ 30 ವರ್ಷದಿಂದ ಶಾಸಕರಿರಲಿಲ್ಲ, ಇದೇ ರೀತಿ ಕಳೆದ 18 ವರ್ಷದಿಂದ ವಿಧಾನ ಪರಿಷತ್ ಸದಸ್ಯರು ಇರಲಿಲ್ಲ ಈಗ ಮತದಾರರ ಸಹಕಾರ, ಸಹಾಯದಿಂದ ವಿಧಾನ ಸಭೆಯಲ್ಲಿ ನಾನು ಸದಸ್ಯನಾದೆ ಇದೇ ರೀತಿ ಶ್ರೀನಿವಾಸ್ ವಿಧಾನ ಪರಿಷತ್ ಸದಸ್ಯರಾದರು. ಕಾಂಗ್ರೆಸ್ ಪಕ್ಷದಿಂದ ಮಾತ್ರ ಸಾಮಾಜಿಕ ನ್ಯಾಯ ನೀಡಲು ಸಾಧ್ಯವಿದೆ. 2029ರ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಬಹುಮತವನ್ನು ತರುವುದರ ಮೂಲಕ ಕೇಂದ್ರದಲ್ಲಿ ಕಾಂಗ್ರೇಸ್ ಪಕ್ಷವನ್ನು ಅಧಿಕಾರಕ್ಕೆ ತರುವಂತ ಕಾರ್ಯವನ್ನು ಎಲ್ಲರು ಸೇರಿ ಮಾಡಬೇಕಿದೆ ಇದಲ್ಲದೆ ಕಾರ್ಯಕರ್ತರ ಚುನಾವಣೆಯಾದ ತಾ.ಪಂ. ಹಾಗೂ ಜಿ.ಪಂ, ಚುನಾವಣೆಯನ್ನು ಸಹಾ ಎಲ್ಲರ ಸಹಕಾರದಿಂದ ಗೆಲ್ಲುವುದರ ಮೂಲಕ ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತರಬೇಕಿದೆ ಎಂದು ಕರೆ ನೀಡಿದರು.

ಮಾಜಿ ಶಾಸಕಿ ಕೆ.ಪೂರ್ಣಿಮಾ ಮಾತನಾಡಿ, ಶಿಕ್ಷಕರ ಎಲ್ಲ ಸಮಸ್ಯೆಗಳನ್ನು ಹಂತಹಂತವಾಗಿ ಪರಿಹರಿಸಲು ಪ್ರಯತ್ನ ಮಾಡುತ್ತೇವೆ. ಕ್ಷೇತ್ರದಲ್ಲಿ ಈ ಹಿಂದೆ ಡಿ.ಸುಧಾಕರ್ ಹಾಗೂ ನಾನು ವೈರಿಗಳಾಗಿರದೆ ಪ್ರತಿಸ್ಪರ್ಧಿ- ಗಳಾಗಿದ್ದೆವು. ಈಗ ಒಂದೇ ಪಕ್ಷದ ಅಡಿಯಲ್ಲಿ ಹೊಂದಾಣಿಕೆಯಿಂದ ಕೆಲಸ ಮಾಡುತ್ತೇವೆ ಎಂದರು.

ಡಿಸಿಸಿ ಜಿಲ್ಲಾಧ್ಯಕ್ಷ ಎಂ.ಕೆ.ತಾಜ್‌ಪೀರ್ ಮಾತನಾಡಿ, ಇಂದು ಸಂಭ್ರಮದ ದಿನವಾಗಿದೆ, ಕಳೆದ ತಿಂಗಳಗಳ ಹಿಂದೆ ವಿಧಾನಸಭೆಗೆ ನಮ್ಮ ಪಕ್ಷದವರನ್ನು ಮತದಾರರು ಆಯ್ಕೆ ಮಾಡಿದರು ಈಗ ವಿಧಾನಪರಿಷತ್‌ಗೆಕಾಂಗ್ರೆಸ್‌ನಅಭ್ಯರ್ಥಿಯ ಕೈಹಿಡಿಯುವುದರ ಮೂಲಕ ಪರಿಷತ್‌ನಲ್ಲಿ ನಮ್ಮ ಪಕ್ಷದ ಸಂಖ್ಯಾ ಬಲವನ್ನು ಹೆಚ್ಚಿಸಿದ್ದಾರೆ. ಉಪನ್ಯಾಸಕರು ತಮ್ಮ ಬೇಡಿಕೆ ಈಡೇರಿಕೆಗಾಗಿ ಪ್ರತಿಭಟನೆಯನ್ನು ಮಾಡುತ್ತಿದ್ದಾಗ ಅಂದಿನ ಬಿಜೆಪಿ ಸರ್ಕಾರ ಸ್ಪಂದನೆ ನೀಡಿಲ್ಲ, ಈ ಸಮಯದಲ್ಲಿ ನಮ್ಮ ರಾಜ್ಯಾಧ್ಯಕ್ಷರಾದ ಶಿವಕುಮಾರ್‌ರವರು ಉಪನ್ಯಾಸಕರ ಸಮಸ್ಯೆಗೆ ಸ್ಪಂದಿಸಿ ನಮ್ಮ ಸರ್ಕಾರ ಅಧಿಕಾರಕ್ಕೆ ಬಂದಾಗ ನಿಮ್ಮ ಸಮಸ್ಯೆಯನ್ನು ಬಗೆಹರಿಸುವುದಾಗಿ ಭರವಸೆಯನ್ನು ನೀಡಿದರು. ಈಗ ಸರ್ಕಾರ ಇದೆ ಅವರ ಸಮಸ್ಯೆಯನ್ನು ಪರಿಹಾರ ಮಾಡಲಿದೆ ಎಂದರು.

ಕಾರ್ಯಕ್ರಮದಲ್ಲಿ ಕಾರ್ಯಾಧ್ಯಕ್ಷರಾದ ಹಾಲಸ್ವಾಮಿ, ಮಹಿಳಾ ಘಟಕದ ಅಧ್ಯಕ್ಷರಾದ ಶ್ರೀಮತಿ ಗೀತಾ ನಂದಿನಿಗೌಡ, ಜಿ.ಪಂ.ಮಾಜಿ ಸದಸ್ಯ ರಘು, ಕೆಡಿಪಿ ಸದಸ್ಯರಾದ ಕೆ.ಸಿ.ನಾಗರಾಜ್, ಡಿಸಿಸಿ ಪ್ರಧಾನ ಕಾರ್ಯದರ್ಶಿಗಳಾದ ಸಂಪತ್ ಕುಮಾರ್, ಮೈಲಾರಪ್ಪ, ಗ್ಯಾರೆಂಟಿ ಸಮಿತಿಯ ಅಧ್ಯಕ್ಷರಾದ ಶಿವಣ್ಣ, ಲಕ್ಷ್ಮೀಕಾಂತ, ವೆಂಕಟೇಶ್, ಜಿ.ಪಂ. ಮಾಜಿ ಅಧ್ಯಕ್ಷ ಬಾಲರಾಜ್, ನಗರಾಭೀವೃದ್ದಿ ಮಾಜಿ ಅಧ್ಯಕ್ಷ ಆರ್.ಕೆ.ಸರ್ದಾರ, ಮಧುಗೌಡ, ಪ್ರಕಾಶ್ ನಾಯ್ಕ್, ಹನೀಫ್, ಖುದ್ದುಸ್, ಪಾತಣ್ಣ, ನಗರಸಭೆ ಮಾಜಿ ಅಧ್ಯಕ್ಷಸಿ.ಟಿ.ಕೃಷ್ಣಮೂರ್ತಿ,ಹೆಚ್.ಮಂಜಪ್ಪ ಸೇರಿದಂತೆ ಇತರರು ಭಾಗವಹಿಸಿದ್ದರು.

# ಜಾಗೃತಿ ವಹಿಸಿ ಕುಡಿಯುವ ನೀರು ಸರಬರಾಜು ಮಾಡಿ: ತಾ.ಪಂ ಇಒ ಹನುಮಂತಪ್ಪ ಸೂಚನೆ

» ಚಿತ್ರದುರ್ಗ

ತಾಲ್ಲೂಕಿನ ಎಲ್ಲಾ 38 ಗ್ರಾಮ ಪಂಚಾಯಿತಿಗಳ ಪಂಚಾಯಿತಿ ಅಭಿವೃದ್ಧಿಗಳು ನೀರುಗಂಟಿಗಳಿಂದ ಪ್ರತಿ ಗ್ರಾಮದಲ್ಲಿ ಕುಡಿಯುವ ನೀರಿನ ಬಗ್ಗೆ ಜಾಗೃತಿ ವಹಿಸಿ ಸ್ವಚ್ಛತೆ ಮೂಲಕ ನೀರು ಸರಬರಾಜು ಮಾಡುವಂತೆ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಹೆಚ್.ಹನುಮಂತಪ್ಪ ಸೂಚನೆ ನೀಡಿದರು.



ನಗರದ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಶನಿವಾರ ಚಿತ್ರದುರ್ಗ ತಾಲ್ಲೂಕು ವ್ಯಾಪ್ತಿಯ ಗ್ರಾಮ ಪಂಚಾಯಿತಿಗಳ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಕಾರ್ಯದರ್ಶಿ ಗ್ರೇಡ್-2, ಗ್ರೇಡ್-1, ದ್ವಿತೀಯ ದರ್ಜೆ ಲೆಕ್ಕ ಸಹಾಯಕರು, ಕರವಸೂಲಿಗಾರ ಮತ್ತು ನೀರುಗಂಟಿಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಈಗಾಗಲೇ ಮುಂಗಾರು ಪ್ರಾರಂಭವಾಗಿರುವುದರಿಂದ ಕುಡಿಯುವ ನೀರಿಗೆ ಸಂಬಂಧಪಟ್ಟಂತೆ ಟ್ಯಾಂಕ್‌ಗಳನ್ನು ಸ್ವಚ್ಛತೆ ಮಾಡುವುದು ಮತ್ತು ಪೈಪ್‌ಲೈನ್‌ಗಳ ದುರಸ್ಥಿ ಮಾಡುವುದು, ಚರಂಡಿಗಳನ್ನು ಕ್ಲೀನಿಂಗ್ ಮಾಡುವುದು ಸೇರಿದಂತೆ ಪ್ರತಿ ತಿಂಗಳಿಗೊಮ್ಮೆ ಕುಡಿಯುವ ನೀರಿಗೆ ಸಂಬಂಧಿಸಿದ ಎಲ್ಲಾ ಕಾರ್ಯಕ್ರಮಗಳನ್ನು ಕಟ್ಟುನಿಟ್ಟಾಗಿ ಕೈಗೊಳ್ಳಬೇಕು ಎಂದು ತಾಕೀತು ಮಾಡಿದರು.

ಸಭೆಯಲ್ಲಿ ತಾಲ್ಲೂಕು ಪಂಚಾಯಿತಿ ಸಹಾಯಕ ನಿರ್ದೇಶಕರಾದ ಹೆಚ್.ಯರ್ರಿಸ್ವಾಮಿ, ರೂಪಾಕುಮಾರಿ, ಯೋಜನಾ ನಿರ್ದೇಶಕ ರಾಘವೇಂದ್ರ, ವ್ಯವಸ್ಥಾಪಕ ತಿಪ್ಪೇಸ್ವಾಮಿ ಸೇರಿದಂತೆ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಕಾರ್ಯದರ್ಶಿ ಗ್ರೇಡ್-2, ಗ್ರೇಡ್-1, ದ್ವಿತೀಯ ದರ್ಜೆ ಲೆಕ್ಕ ಸಹಾಯಕರು, ಕರವಸೂಲಿಗಾರ ಮತ್ತು ನೀರುಗಂಟಿಗಳು ಇದ್ದರು.



ಹೊಸದುರ್ಗ ಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜು ಪ್ರೌಢಶಾಲೆ ವಿಭಾಗದ ವತಿಯಿಂದ ವಿಶ್ವ ಪರಿಸರ ದಿನಾಚರಣೆಯನ್ನು ಶಾಲಾ ಮೈದಾನದಲ್ಲಿ ಗಿಡಗಳನ್ನು ಹಾಕುವುದರ ಮೂಲಕ ಆಚರಿಸಲಾಯಿತು

## ಗ್ರಾಮೀಣ ವಿದ್ಯಾರ್ಥಿಗಳಿಗೆ ಸೌಲಭ್ಯಗಳನ್ನು ಒದಗಿಸಿ ಉತ್ತಮ ಜ್ಞಾನಾರ್ಜನೆಗೆ ನೆರವಾಗಿ



» ಚಳ್ಳಕೆರೆ

ಗ್ರಾಮೀಣ ಭಾಗದ ಶಾಲೆಗಳಲ್ಲಿ ವಿದ್ಯಾಭ್ಯಾಸ ಮಾಡುವ ವಿದ್ಯಾರ್ಥಿಗಳಿಗೆ ಸರ್ಕಾರ ಹಲವಾರು ಸೌಲಭ್ಯಗಳನ್ನು ಒದಗಿಸಿದರೂ ಕೆಲವೊಮ್ಮೆ ವಿದ್ಯಾರ್ಥಿಗಳಿಗೆ ಪೂರ್ಣಪ್ರಮಾಣದಲ್ಲಿ ಈ ಸೌಲಭ್ಯಗಳು ದೊರಕುವುದು ಕಷ್ಟವಾಗುತ್ತದೆ. ಇಂತಹ ಸಂದರ್ಭದಲ್ಲಿ ಸ್ವಯಂಸೇವಾ ಸಂಸ್ಥೆಗಳು ತಮ್ಮ ಸಹಾಯಸ್ತವನ್ನು ಚಾಚಿದರೆ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಹೆಚ್ಚು ಸಹಾಯಕವಾಗಲಿದೆ ಎಂದು ಇನ್ನರ್ ವ್ಹೀಲ್ ಕ್ಲಬ್ ಅಧ್ಯಕ್ಷ ಮೀರಾರಮೇಶ್ ತಿಳಿಸಿದರು. ಅವರು, ಸೋಮವಾರ ಡಾಬಸ್‌ಪೇಟೆ ಸರ್ಕಾರಿ ಗ್ರಾಮಾಂತರ ಪ್ರೌಢಶಾಲೆಗೆ ತುಮಕೂರು ಸೆಂಟ್ರಲ್ ಇನ್ನರ್‌ವ್ಹೀಲ್ ಕ್ಲಬ್ ಅಧ್ಯಕ್ಷೆ ಕಾತ್ಯಾಯಿನಿ ಸಹಯೋಗದೊಂದಿಗೆ ಪ್ರೊಜೆಕ್ಟರನ್ನು ಕೊಡುಗೆಯಾಗಿ ನೀಡಿ ಮಾತನಾಡಿದರು. ಗ್ರಾಮಾಂತರ ಶಾಲೆಗಳಿಗೆ ಅಗತ್ಯಸೌಲಭ್ಯ ಪಡೆದುಕೊಳ್ಳಲು ಶಾಲೆಯ ಎಸ್‌ಡಿಎಂಸಿ ಸದಸ್ಯರು ಮತ್ತು ಶಿಕ್ಷಕರ ಸಮೂಹ ನೆರವು ಪಡೆದುಕೊಳ್ಳುವಲ್ಲಿ ಯಾವುದೇ ಸಂಶಯಬೇಡ. ಸಮಾಜದಲ್ಲಿ ಹಲವಾರು ಕೊಡುಗೈದಾನಿಗಳಿದ್ದು ಅವರ ಸಹಕಾರವನ್ನು ಪಡೆಯುವಂತೆ ಸಲಹೆ ನೀಡಿದರು.

ಅರುಣಸುಬ್ಬರಾಜ್, ಯಶೋಧ, ಸರೋಜಮ್ಮ, ಭುವನೇಶ್ವರಿ, ಚಂದ್ರಕಲಾ, ಮಂಜುಳಾ, ಬಾಬು, ಮಹೇಶ್, ವಿಜಯ್, ನವೀನ್, ಆದಿತ್ಯ, ಶಿಕ್ಷಕ ಚಿಕ್ಕಣ್ಣ ಮುಂತಾದವರು ಉಪಸ್ಥಿತರಿದ್ದರು.

## ಪ್ರಮುಖ ಸುದ್ದಿ

# ಶಿಕ್ಷಣ, ಆರೋಗ್ಯಕ್ಕೆ ಹೆಚ್ಚಿನ ಒತ್ತು: ಮಂಜುನಾಥ್ ಭಾಗವತ್

» ಚಿತ್ರದುರ್ಗ

ನನ್ನ ಅವಧಿಯಲ್ಲಿ ಶಿಕ್ಷಣ ಮತ್ತು ಆರೋಗ್ಯಕ್ಕೆ ಹೆಚ್ಚಿನ ಒತ್ತು ನೀಡುವುದರ ಮೂಲಕ ಕ್ಲಬ್ ಉನ್ನತ ಸ್ಥಾನಕ್ಕೆ ತೆಗೆದುಕೊಂಡು ಹೋಗಲಾಗುವುದು ಎಂದು ರೋಟರಿ ಕ್ಲಬ್ ಚಿನ್ಮೂಲಾದ್ರಿ ನೂತನ ಅಧ್ಯಕ್ಷ ಮಂಜುನಾಥ್ ಭಾಗವತ್ ತಿಳಿಸಿದರು.




ಚಿತ್ರದುರ್ಗ ನಗರದ ಎಸ್.ಆರ್.ಬಿ.ಎಂ.ಎಸ್. ರೋಟರಿ ಬಾಲಭವನದಲ್ಲಿ ಹಮ್ಮಿಕೊಂಡಿದ್ದ 2024-25ನೇ ಸಾಲಿಗೆ ಆಯ್ಕೆಯಾದ ರೋಟರಿಕ್ಲಬ್ ಚಿನ್ಮೂಲಾದ್ರಿನ ಪದಾಧಿಕಾರಿಗಳ ಪದಗ್ರಹಣ ಸಮಾರಂಭದಲ್ಲಿ ಅಧ್ಯಕ್ಷರಾಗಿ ಅಧಿಕಾರ ಸ್ವೀಕಾರ ಮಾಡಿದ ನಂತರ ಮಾತನಾಡಿದರು.

ಅರ್ಹತೆ, ಅವಕಾಶ ಮತ್ತು ಅನುಗ್ರಹ ಇದ್ದಾಗ ಮಾತ್ರ ಇಂತಹ ಹುದ್ದೆಗಳು ದೂರಕಲು ಸಾಧ್ಯವಿದೆ, ಈ ಅರ್ಹತೆ ನನ್ನಲ್ಲಿ ಇದ್ದೇಯೂ ಇಲ್ಲವೂ ಗೋತ್ತಿಲ್ಲ ಆದರೂ ಸಹಾ ಅಧ್ಯಕ್ಷ ಸ್ಥಾನ ಬಂದಿದೆ. ನನ್ನ ಅಧಿಕಾರದ ಅವಧಿಯಲ್ಲಿ ಆರೋಗ್ಯ ಮತ್ತ ಶಿಕ್ಷಣಕ್ಕೆ ಹೆಚ್ಚಿನ ಒತ್ತನ್ನು ನೀಡುವುದಾಗಿ ತಿಳಿಸಿದರು.ನಾನು ಈ ಕ್ಲಬ್ ಅಧ್ಯಕ್ಷನಾಗಿ ಸಮಾಜಕ್ಕೆ ಏನಾದರೂ ಸಹಾ ಕೊಡುಗೆಯನ್ನು ನೀಡಬೇಕಿದೆ, ಜನತೆಯಲ್ಲಿ ಅರೋಗ್ಯದ ಬಗ್ಗೆ ಅರಿವನ್ನು ಮೂಡಿಸುವಕಾರ್ಯವನ್ನುಮಾಡುವುದರ ಜೊತೆಗೆ ಶಿಕ್ಷಣಕ್ಕೆ ಹೆಚ್ಚಿನ ಒತ್ತನ್ನು ನೀಡಿ ನನ್ನ ಕೈಲಾದ ಸಹಾಯವನ್ನು ಮಾಡುವ ಭರವಸೆಯನ್ನು ನೀಡಿದರು.

ರೋಟರಿಕ್ಲಬ್ ಚಿನ್ಮೂಲಾದ್ರಿಯ ಮಾಜಿ ಅಧ್ಯಕ್ಷ ಶಂಕರಪ್ಪ ಮಾತನಾಡಿ, ರೋಟರಿ ಎನ್ನುವುದು ಒಂದು ಕುಟುಂಬ ಇದ್ದಂತೆ ಇಲ್ಲಿ ಎಲ್ಲರು ಸೇರಿ ಸಮಾಜದ ಏಳ್ಗೆಗಾಗಿ ಕೆಲಸವನ್ನು ಮಾಡಬೇಕಿದೆ, ಮನೆಯಲ್ಲಿ ಯಾವ ರೀತಿ ಇರುತ್ತೇವ ಅದೇ ರೀತಿ ನಮ್ಮಲ್ಲಿಯೂ ಸಹಾ ಇರಬೇಕಿದೆ. ಬೇರೆಯವರಿಗೆ ಸಹಾಯವನ್ನು ಮಾಡುವುದರ ಮೂಲಕ ಸಮಾಜ ಸೇವೆಯನ್ನು ಮಾಡಬೇಕಿದೆ. ನನ್ನ ಒಂದು ವರ್ಷ ಯಾವ ರೀತಿ ಕಳೆಯಿತು ಎನ್ನುವುದು ಗೊತ್ತಾಗಿಲ್ಲ, ಈ ಕ್ಲಬ್ನಲ್ಲಿ ಕೆಲಸವನ್ನು ಮಾಡುವುದರ ಮೂಲಕ ನನ್ನ ಮಾನಸಿಕ ನೆಮ್ಮದಿಯೂ ಸಹಾ ಹೆಚ್ಚಾಗಿದೆ. ಸಂತೋಷವನ್ನು ತಂದಿದೆ. ನಮ್ಮ ತಂಡವೂ ಸಹಾ ನನಗೆ ಹೆಚ್ಚಿನ ರೀತಿಯಲ್ಲಿ ನೆರವನ್ನು ನೀಡಿದೆ ಇದರಿಂದ ಉತ್ತಮವಾದ ಕಾರ್ಯವನ್ನು ಮಾಡಿದ ತೃಪ್ತಿ ನನಗೆ ಇದೆ ಎಂದರು

2025-26ನೇ ಸಾಲಿನ ರೋಟೇರಿಯನ್ ಡಿ.ಜಿ. ರವೀಂದ್ರ ಮಾತನಾಡಿ, ಅಧಿಕಾರವ ಸಿಕ್ಕಾಗಿ ಅದರ ಸದುಪಯೋಗ ಮಾಡಿಕೊಳ್ಳಬೇಕಿದೆ, ಪ್ರಪಂಚದಲ್ಲಿ ರೋಟರಿ ಕ್ಲಬ್ಗೆ 144 ಲಕ್ಷ ಜನ ಸದಸ್ಯರಿದ್ದಾರೆ. ಇದು ಪ್ರಪಂಚದಲ್ಲಿ ಉತ್ತಮವಾದ ಕಾರ್ಯವನ್ನು ಮಾಡುತ್ತಿದೆ. ಕಳೆದ 35 ವರ್ಷದಂದ ದೇಶದಲ್ಲಿ ಪೋಲಿಯೂ ರೋಗವನ್ನು ನಿರ್ಮೂಲನೆ ಮಾಡಲು ಉಚಿತವಾಗಿ ಪೋಲೊಯೂನ ಹನಿಯನ್ನು ನೀಡಲಾಗುತ್ತಿದೆ. ಇದರೊಂದಿಗೆ ಶಿಕ್ಷಣಕ್ಕೆ ಹೆಚ್ಚಿನ ಮಹತ್ವನ್ನು ನೀಡುವುದರ ಮೂಲಕ ಎಲ್ಲರು ಜ್ಞಾನವನ್ನು ಪಡೆಯಲು ಪ್ರೇರೆಪಿಸುತ್ತಿದೆ ಎಂದರು.ರೋ.ಡಿ.ಜಿ. ಮಧುಪ್ರಸಾದ್ ಮಾತನಾಡಿ, ರೋಟರಿ ಕ್ಲಬ್ ಚಳ್ಳಕೆರೆ ರಸ್ತೆಯಲ್ಲಿ ಉತ್ತಮವಾದ ಆರೋಗ್ಯ ಕೇಂದ್ರವನ್ನು ನಿರ್ಮಾಣ ಮಾಡುತ್ತಿದೆ ಇಲ್ಲಿ ಡಯಾಲಿಸೀಸ್ ಸೆಂಟರ್, ಕೌಶಲ್ಯಾಭಿವೃದ್ಧಿ ಕೇಂದ್ರ ಸೇರಿದಂತೆ ಇತರೆ ಆರೋಗ್ಯ ತಪಾಸಣೆಯನ್ನು ಮಾಡುವ ಕೇಂದ್ರವನ್ನು ಸುಮಾರು 3 ಕೋಟಿ ವೆಚ್ಚದಲ್ಲಿ ನಿರ್ಮಾಣ ಮ ಮಾಡಲಾಗುತ್ತಿದೆ ಅತಿ ಶೀಘ್ರದಲ್ಲಿಯೇ ಇದರ ಉದ್ಘಾಟನೆಯಾಗಲಿದ್ದು ಸಾರ್ವಜನಿಕರ ಉಪಯೋಗಕ್ಕೆ ಲಭ್ಯವಾಗಲಿದೆ ಎಂದರು. ರೋಟರಿಕ್ಲಬ್ ಚಿನ್ಮೂಲಾದ್ರಿನ ಹಿಂದಿನ ಕಾರ್ಯದರ್ಶಿಗಳಾದ ಲಕ್ಷ್ಮೀಕಾಂತ ವಾರ್ಷಿಕ ವರದಿಯನ್ನು ಮಂಡಿಸಿದರು. ವೇದಿಕೆಯಲ್ಲಿ ರೋಟರಿಕ್ಲಬ್ ಚಿನ್ಮೂಲಾದ್ರಿನ 2024-25ನೇ ಸಾಲಿನ ಕಾರ್ಯದರ್ಶಿಗಳಾದ ಶಿವರಾಂ,ಗೌರ್ನರ್ ಉಮ್ಮೇಶ್ ತುಪ್ಪದ್, ಸುದರ್ಶನ್ ಉಪಸ್ಥಿತರಿದ್ದರು. ಗುರುಮೂರ್ತಿ ಪ್ರಾರ್ಥಿಸಿದರೆ, ಶಂಕ್ರಪ್ಪ ಸ್ವಾಗತಿಸಿದರು, ತಿಪ್ಪೇಸ್ವಾಮಿ ಮತ್ತು ಗಾಯತ್ರಿ ಕಾರ್ಯಕ್ರಮ ನಿರೂಪಿಸಿದರು. ಪ್ರಾರಂಭದಲ್ಲಿ ಲಾಸ್ಯ ಪೌಡೇಷನ್ ವಿದ್ಯಾರ್ಥಿಗಳಿಂದ ಭರತನಾಟ್ಯ ಕಾರ್ಯಕ್ರಮ ನಡೆಯಿತು.

## ಫಾಸ್ಟ್ ನ್ಯೂಸ್

### ತ್ಯಾಜ್ಯ ಮರುಬಳಕೆ ವಸ್ತು ಸಂಗ್ರಹಣೆ ಮಾಡಿ ಪುರಸಭೆಗೆ ಆಧಾಯ ಬರುವಂತೆ ಮಾಡಲಾಗಿದೆ

» **ಹೊಸದುರ್ಗ**



ಮನೆ-ಮನೆ ಕಸ ಸಂಗ್ರಹಣೆ ಮಾಡಿ ಹಸಿ ಮತ್ತು ಒಣ ಕಸವನ್ನು ಬೇರ್ಪಡಿಸಿ ಗೊಬ್ಬರ ತಯಾರಿಸುವುದು, ತ್ಯಾಜ್ಯ ಮರುಬಳಕೆ ವಸ್ತುಗಳನ್ನು ಸಂಗ್ರಹಣೆ ಮಾಡಿ ಪುರಸಭೆಗೆ ಆಧಾಯ ಬರುವಂತೆ ಮಾಡಲಾಗುತ್ತಿದೆ ಎಂದು ಪುರಸಭಾ ಮುಖ್ಯಾಧಿಕಾರಿ ತಿಮ್ಮರಾಜು ಜಿ.ವಿ.ತಿಳಿಸಿದರು. ಪಟ್ಟಣದ ಪುರಸಭಾ ಕಛೇರಿಯಲ್ಲಿ ಸೋಮವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಪಟ್ಟಣದ ಪುರಸಭೆಯಲ್ಲಿ ಸಮರ್ಪಕ ಸ್ವಚ್ಛತೆಗಾಗಿ ಶ್ರಮಿಸುವ ಪೌರಕಾರ್ಮಿಕರು ಸ್ವಚ್ಛತಾ ಕಾರ್ಮಿಕರು, ಲೋಡರ್ಸ್, ಕ್ಲೀನರ್ಸ್ ಮತ್ತು ವಾಹನ ಚಾಲಕರು ಸೇರಿ ಒಟ್ಟು 69 ಜನ ಖಾಯಂ ಹಾಗೂ ಹೊರಗುತ್ತಿಗೆಯಡಿ ಸುಮಾರು 20 ವರ್ಷಗಳಿಂದ ಕಾರ್ಯನಿರ್ವಹಿಸುತ್ತಿದ್ದು ಪ್ರತಿನಿತ್ಯ ಬೆಳಿಗ್ಗ:5.00 ಗಂಟೆಗೆ ಸ್ವಚ್ಛತೆ ಕೆಲಸಕ್ಕೆ ಹಾಜರಾಗಿ ಪಟ್ಟಣದ ರಸ್ತೆ ಸ್ವಚ್ಛತೆ, ಬೀದಿ, ಬಸ್ ನಿಲ್ದಾಣ, ಮಾರ್ಕೆಟ್ ಮತ್ತು ಸಾರ್ವಜನಿಕರ ರಸ್ತೆಗಳನ್ನು ಸ್ವಚ್ಛತೆ ಕಾಪಾಡುತ್ತಿದ್ದು ಸದಸ್ಯರೊಂದಿಗೆ ಉತ್ತಮ ಬಾಂದವ್ಯ ಹೊಂದಿದ್ದು ಕೌನ್ಸಿಲ್ ಸಭೆಯಲ್ಲಿ ಕಾರ್ಮಿಕರಿಗೆ ಸಂಬಂಧಿಸಿದಂತೆ ಉತ್ತಮ ನಿರ್ಣಯಗಳನ್ನು ಕೈಗೊಂಡು ಪುರಸಭೆಯಿಂದ ಪ್ರತಿ ತಿಂಗಳು ವೇತನ, ವಿಶೇಷ ಭತ್ಯೆಗಳನ್ನು ನೀಡುತ್ತಿದ್ದು ಸಮವಸ್ತ್ರಗಳನ್ನು ಸಹ ನೀಡಲಾಗುತ್ತಿದೆ ಹಾಗೂ ಬೆಳಗಿನ ಉಪಹಾರ, ಸುರಕ್ಷಾಧಿರಿಸುಗಳಾದ ಗಂಬೂಟ್, ಹ್ಯಾಂಡ್ ಗ್ಲೌಸ್, ಮಾಸ್ಕ್ ನೀಡುಲಾಗುತ್ತಿದೆ, ಜೊತೆಗೆ ಕಾಲ-ಕಾಲಕ್ಕೆ ಆರೋಗ್ಯ ತಪಾಸಣೆ ಹಾಗೂ ಶೇ.24% ರಡಿ ಪೌರಕಾರ್ಮಿಕರಿಗೆ 20% ಅನುಧಾನ ಕಾಯ್ದಿರಿಸಿ ವಿವಿಧ ಸೌಲಭ್ಯಗಳನ್ನು ನೀಡಲಾಗುತ್ತಿದ್ದು ಹೊರಗುತ್ತಿಗೆ ಕಾರ್ಮಿಕರಿಗೆ ಇಎಸ್ಐ,ಪಿಎಫ್, ಎಸ್‌ಬಿಐ ಜನರಲ್ ಇನ್ಸುರೆನ್ಸ್ ಇತರೆ ಸೌಲಭ್ಯಗಳನ್ನು ನೀಡಲಾಗುತ್ತಿದೆ ಎಂಬ ಮಾಹಿತಿ ನೀಡಿದರು.

### ತರಬೇತಿ ಅರ್ಜಿ ಆಹ್ವಾನ

» **ದಾವಣಗೆರೆ**

ಆಡಳಿತ ನ್ಯಾಯಧೀಕರಣದಲ್ಲಿ ಪರಿಶಿಷ್ಟ ವರ್ಗದ ಕಾನೂನು ಪದವೀಧರರಿಗೆ ವೃತ್ತಿ ಕಾನೂನು ತರಬೇತಿ ನೀಡಲು ಕಾನೂನು ಪದವಿ ಹೊಂದಿದ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

# ಕುಡಿತದ ಚಟದಿಂದ ದೂರವಾಗಿ ಗುಣಾತ್ಮಕ ಬದುಕನ್ನು ಕಟ್ಟಿಕೊಳ್ಳಲು ಮುಂದಾಗಿ: ನಾಗರಾಜಕುಲಾಲ್

» **ಚಳ್ಳಕೆರೆ**

ಪ್ರತಿಯೊಬ್ಬ ವ್ಯಕ್ತಿಯೂ ತನ್ನ ಬದುಕು ರೂಪಿಸಿಕೊಳ್ಳಲು ಪ್ರಾಮಾಣಿಕವಾಗಿ ಪ್ರಯತ್ನಿಸುತ್ತಾನೆ.ಧಾರ್ಮಿಕ,ಸಾತ್ವಿಕಹಾಗೂ ದೈವಸಂಕಲ್ಪದೊಂದಿಗೆ ತನ್ನ ಬದುಕನ್ನು ಎಲ್ಲರೂ ಮೆಚ್ಚುವಂತೆ ನಡೆಸುವವರು ಹಲವಾರು ಇದ್ದಾರೆ. ಆದರೆ, ಕುಡಿತದ ಚಟಕ್ಕೀಡಾಗಿ ತಾನು ನಾಶವಾಗುವುದಲ್ಲದೆ, ತನ್ನ ಸಂಸಾರವನ್ನೇ ಬೀದಿಪಾಲು ಮಾಡಲು ಹೊರಟ ಜನಸಂಖ್ಯೆ ಕಡಿಮೆ ಏನಿಲ್ಲ. ಕಳೆದ ಹಲವಾರು ದಶಕಗಳಿಂದ ಪೂಜ್ಯ ವೀರೇಂದ್ರಹೆಗ್ಗಡೆಯವರ ಮಾರ್ಗದರ್ಶನದಲ್ಲಿ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಕುಡಿತ ಚಟವನ್ನು ದೂರವಿಡಲು ಅನೇಕ ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳುವ ಮೂಲಕ ಲಕ್ಷಾಂತರ ಜನರ ಬದುಕಿಗೆ ಆಶಾಕಿರಣವಾಗಿದೆ ಎಂದು ಜಿಲ್ಲಾ ಜನಜಾಗೃತಿ ಪ್ರಾದೇಶಿಕ ಕಚೇರಿ ಯೋಜನಾಧಿಕಾರಿ ನಾಗರಾಜುಕುಲಾಲ್ ತಿಳಿಸಿದರು.



ಅವರು, ಸೋಮವಾರ ಯೋಜನಾಧಿಕಾರಿ ಕಚೇರಿ ಆವರಣದಲ್ಲಿ ಶ್ರೀಕ್ಷೇತ್ರಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಹಮ್ಮಿಕೊಂಡಿದ್ದ ಪಾನಮುಕ್ತ ಸದಸ್ಯರ ನವಜೀವನೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ವಿಶೇಷವಾಗಿ ಚಿತ್ರದುರ್ಗ ಜಿಲ್ಲೆಯ ಹಲವಾರು ತಾಲ್ಲೂಕು ಹಾಗೂ ಹೋಬಳಿ ಮಟ್ಟದ ಕೇಂದ್ರದಲ್ಲೂ ಸಹ ಈ ಕಾರ್ಯಕ್ರಮ ಆಯೋಜಿಸಿ ಹಲವಾರು ಮದ್ಯವೆಸನಿಗಳನ್ನು ಮದ್ಯಚಟದಿಂದ ಮುಕ್ತರನ್ನಾಗಿ ಮಾಡಲಾಗಿದೆ. ಅಂತಹ ವ್ಯಕ್ತಿಗಳು ಇಂದು ಎಲ್ಲರಿಗೂ ಮಾದರಿಯಾಗುವಂತೆ ಜೀವನ ನಡೆಸುತ್ತಿರುವುದು ನಮಗೆ ಸಂತಸ ತಂದಿದೆ ಎಂದರು. ಪ್ರಾಸ್ತಾವಿಕವಾಗಿ ಮಾತನಾಡಿದ ತಾಲ್ಲೂಕು ಜನಜಾಗೃತಿ ವೇದಿಕೆ ಸದಸ್ಯ, ಹೋಟೆಲ್ ಉದ್ಯಮಿ ಕಿಶೋರ್‌ಶೆಟ್ಟಿ,ಮಧ್ಯವೆಸನಿಗಳು ಹಲವಾರು ಕಾರಣಗಳಿಂದಾಗಿ ಇಂತಹ ಚಟಗಳಿಗೆ ಬಲಿಯಾಗುತ್ತಿದ್ದಾರೆ. ಅವರ ಬದುಕಿನಲ್ಲಿ ಬದಲಾವಣೆ ತರುವಂತಹ ಕಾರ್ಯವನ್ನು ಮಾಡುವುದು ದುಸ್ಸಾಹದ ಕೆಲಸ. ಆದರೆ, ಇದನ್ನು ಮುಂದುವರೆಸಿದರೆ ಸಾವಿರಾರು ಬಡಕುಟುಂಬಗಳು ಆಸರೆ ಇಲ್ಲದೆ ಬೀದಿಪಾಲಾಗುತ್ತವೆ.ಮನೆಯ ಯಜಮಾನ ಇಂತಹ ಚಟಗಳಿಂದ ದೂರವಿದರೆ ಇಡೀ ಸಂಸಾರವೇ ಸುಖಸಾಗರದಲ್ಲಿರುತ್ತದೆ. ಪುಣ್ಯಕೆಲಸವನ್ನು ಮಾಡಲು ನಮ್ಮೆಲ್ಲರಿಗೂ ಪ್ರೇರಣೆಯಾದವರು ಶ್ರೀವೀರೇಂದ್ರಹೆಗ್ಗಡೆಯವರು. ಇಂದು ಪಾಲಮುಕ್ತಸದಸ್ಯರು ಮತ್ತೊಮ್ಮೆ ಎಂದಿಗೂ ಜೀವನದಲ್ಲಿ ಈ ಚಟಕ್ಕೆ ಬಲಿಯಾಗದಂತೆ ಎಚ್ಚರಿಕೆ ವಹಿಸಿ ಎಂದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ವ್ಯವಸ್ಥಾಪಕ ಸಮಿತಿ ಅಧ್ಯಕ್ಷ ಆರ್.ದೊಡ್ಡರಂಗಪ್ಪ ಮಾತನಾಡಿ, ಇಂದು ನೂರಾರು ಮದ್ಯವೆಸನಿಗಳು ತಮ್ಮ ಚಟವನ್ನು ತ್ಯಜಿಸಿ ಹೊಸ ಉಲ್ಲಾಸದ ಜೀವನವನ್ನು ಕಂಡುಕೊಳ್ಳಲು ಮುಂದಾಗಿರುವುದು ಹೆಮ್ಮೆಯ ವಿಷಯವೆಂದರು. ಕಾರ್ಯಕ್ರಮದಲ್ಲಿ ನಗರಸಭೆ ನಾಮಿನಿ ಸದಸ್ಯ ನೇತಾಜಿಪ್ರಸನ್ನ, ತಾಲ್ಲೂಕು ಯೋಜನಾಧಿಕಾರಿ ಎಂ.ಶಶಿಕಲಾ, ರುದ್ರಪ್ಪ, ವಿಮಲಮ್ಮ ಮುಂತಾದವರು ಉಪಸ್ಥಿತರಿದ್ದರು.

# ಹೊಸದುರ್ಗದಲ್ಲಿ ಅದ್ದೂರಿ ಬಕ್ರೀದ್ ಆಚರಣೆ



» **ಹೊಸದುರ್ಗ**

ಪಟ್ಟಣದ ಮುಸ್ಲಿಂ ಬಾಂಧವರು ಸೋಮವಾರ ಪವಿತ್ರ ಬಕ್ರೀದ್ ಹಬ್ಬವನ್ನ ಅತ್ಯಂತ ವೈಭವಯುತವಾಗಿ ಆಚರಿಸಿದರು.

ಬೆಳಿಗ್ಗೆ ಅವರ ಧರ್ಮದ ಪ್ರಕಾರ ಮಸೀದಿಯಿಂದ ಮೆರವಣಿಗೆ ಹೊರಟು ಪ್ರಾರ್ಥನಾ ಮಂದಿರವನ್ನ ತಲುಪಿ ಪ್ರಾರ್ಥನೆ ಸಲ್ಲಿಸಿದರು.ಪಟ್ಟಣದ ಮುಸ್ಲಿಂ ಮರು ಒಂದೆಡೆ ಸೇರಿ ಪ್ರಾರ್ಥನೆ ಮಾಡಿದರು. ಮುಖಂಡರುಗಳು ಪ್ರಾರ್ಥನಾ ಸಂಧರ್ಬದಲ್ಲಿ ಹಾಜರಿದ್ದರು.

ಶಾಸಕಬಿ.ಜಿ.ಗೋವಿಂದಪ್ಪ,ಇ.ಓ ಸುನಿಲ್ ಕುಮಾರ್, ತಹಶಿಲ್ದಾರ್ ತಿರುಪತಿಪಾಟೀಲ್ ಪುರಸಭೆ ಮುಖ್ಯಾಧಿಕಾರಿ ತಿಮ್ಮರಾಜು ಜಿ.ವಿ. ಮುಖಂಡರುಗಳು ಭಾಗವಹಿಸಿ ಮುಸ್ಲಿಂ ಬಾಂಧವರಿಗೆ ಶುಭ ಕೋರಿದರು.ಸಿಪಿಐ ತಿಮ್ಮಣ್ಣ ಅವರ ನೇತೃತ್ವದಲ್ಲಿ ಪೋಲಿಸ್ ಬಂದೂಬಸ್ತ್ ಆಯೋಜಿಸಲಾಗಿತ್ತು.

# ವಿದ್ಯಾರ್ಥಿಗಳಲ್ಲಿ ಪಠ್ಯ ವಿಷಯದ ಜೊತೆ ಮೌಲ್ಯಪ್ರಜ್ಞೆ ಬೆಳೆಸಿ: ಪ್ರಶಾಂತ್



» **ಹೊಸದುರ್ಗ**

ತಾಲೂಕಿನ ಕಬ್ಬಳ, ಹೇರೂರು, ಬಾಗೂರು ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಿಗೆ ಡಯಟ್ ಉಪನ್ಯಾಸಕರ ತಂಡ ಶುಕ್ರವಾರ ಮಿಂಚಿನ ಸಂಚಾರ ಭೇಟಿ ನೀಡಿ, ಶೈಕ್ಷಣಿಕ ಪ್ರಕ್ರಿಯೆಯ ಸಿದ್ಧತಾ ಚಟುವಟಿಕೆಗಳನ್ನು ಪರಿಶೀಲಿಸಿತು. ಡಯಟ್ ಉಪನ್ಯಾಸಕ ಕೆ.ಜಿ.ಪ್ರಶಾಂತ್ ಮಾತನಾಡಿ, ಶಿಕ್ಷಕರು ಪಠ್ಯ ವಿಷಯ ಬೋಧಿಸುವುದರ ಜೊತೆಗೆ ವಿದ್ಯಾರ್ಥಿಗಳಲ್ಲಿ ಮೌಲ್ಯಪ್ರಜ್ಞೆ ಬೆಳೆಸಬೇಕು. ಮಕ್ಕಳಿಗೆ ಪುಸ್ತಕಗಳನ್ನು ನೀಡಿ ಓದುವ ಹವ್ಯಾಸ ಬೆಳೆಸಬೇಕು. ಶಾಲಾ ದಾಖಲಾತಿಗಳು, ಭೌತಿಕ ಸಂಪನ್ಮೂಲಗಳು, ನಲಿಕಲಿ ತರಗತಿ ನಿರ್ವಹಣೆ ಪರಿಶೀಲಿಸಿದ ಅವರು ಪ್ರಸಕ್ತ ವರ್ಷದಲ್ಲಿ ಶಿಕ್ಷಕರು ವಾರ್ಷಿಕ ಕ್ರಿಯಾ ಯೋಜನೆಯಂತೆ ಸಿದ್ಧತೆ ಮಾಡಿಕೊಂಡು ಮಕ್ಕಳ ಕಲಿಕಾ ಬಲವರ್ಧನೆಗೆ ಶ್ರಮಿಸಬೇಕು ಎಂದು ತಿಳಿಸಿದರು.





# ತ್ಯಾಗ ಬಲಿದಾನದ ಸಂಕೇತ ಬಕ್ರಿದ್ ಹಬ್ಬ

ಧರ್ಮ ಎಂದರೆ ನಂಬಿಕೆ. ನಂಬಿಕೆಯ ಆಧಾರದ ಮೇಲೆಯೇ ಧರ್ಮವು ನಿಂತಿದೆ. ಜಗತ್ತಿನಲ್ಲಿ ಹಲವಾರು ಧರ್ಮಗಳು ಆಚರಣೆಯಲ್ಲಿವೆ. ಅವುಗಳಲ್ಲಿ ಇಸ್ಲಾಂ ಧರ್ಮವು ಒಂದು ಪ್ರಮುಖ ಧರ್ಮವಾಗಿದೆ. ಈಮಾನ್ ಎಂಬುದರ ಅರ್ಥ ವಿಶ್ವಾಸ ಅಥವಾ ನಂಬಿಕೆ. ಇಸ್ಲಾಂ ಎಂದರೆ ಸೃಷ್ಟಿಕರ್ತನಿಗೆ ಶರಣಾಗಿ ಶಾಂತಿಯಿಂದ ಬದುಕುವುದು ಎಂದರ್ಥ.

ಜಗತ್ತಿಗೆ ಶಾಂತಿಯ ಸಂದೇಶವನ್ನು ಸಾರಿದ ಪ್ರವಾದಿ ಮಹಮದ್ ಪೈಗಂಬರ್‌ರವರು ತಮ್ಮ ವಿದಾಯ ಭಾಷಣದಲ್ಲಿ ವಿಶ್ವ ಸಮಾನತೆಯನ್ನು ಎತ್ತಿ ಹಿಡಿಯುತ್ತ ಈ ರೀತಿ ಹೇಳುತ್ತಾರೆ. ನಿಮ್ಮ ಪೈಕಿ ಯಾರ ಮೇಲೆ ಯಾರಿಗೂ ಶ್ರೇಷ್ಠತೆಯಿಲ್ಲ. ಬಿಳಿಯನಿಗೆ ಕರಿಯನ ಮೇಲಾಗಲಿ, ಕರಿಯನಿಗೆ ಬಿಳಿಯನ ಮೇಲಾಗಲಿ, ಶ್ರೀಮಂತನಿಗೆ ಬಡವನ ಮೇಲಾಗಲಿ, ಬಡವನಿಗೆ ಶ್ರೀಮಂತನ ಮೇಲಾಗಲಿ ಯಾವುದೇ ಶ್ರೇಷ್ಠತೆಯಿಲ್ಲ. ದೇಶ, ವರ್ಣ, ಅಂತಸ್ತಿನ ಆಧಾರದ ಮೇಲೆ ನಿಮ್ಮಲ್ಲಿ ಯಾರೂ ಶ್ರೇಷ್ಠರಲ್ಲ. ಯಾರು ನಿಮ್ಮಲ್ಲಿ ಅತಿ ಹೆಚ್ಚು ದೇವ ಭಯವುಳ್ಳವನೋ ಅವನೆ ಶ್ರೇಷ್ಠನು ಎಂದು ಸಾರುತ್ತಾರೆ.

ಇಸ್ಲಾಂ ಧರ್ಮದ ಪ್ರಮುಖ ಹಬ್ಬಗಳಾದ ರಂಜಾನ್ ಮತ್ತು ಬಕ್ರಿದ್ ಹಬ್ಬಗಳು ತ್ಯಾಗ, ಬಲಿದಾನ, ಸಮಾನತೆಯ ಸಂದೇಶವನ್ನು ಸಾರುತ್ತವೆ. ಪವಿತ್ರ ರಂಜಾನ್ ಮಾಸದಲ್ಲಿ ಒಂದು ತಿಂಗಳ ಕಾಲ ಉಪವಾಸ ಆಚರಿಸಿ ಮೈ ಮನಸ್ಸುಗಳನ್ನು ಶುದ್ದಿಕರಿಸಿ ಕೊಳ್ಳಲಾಗುತ್ತದೆ. ಅದೇ ರೀತಿ ಮುಖ್ಯವಾಗಿ ಬಡವರ, ನಿರ್ಗತಿಕರ ಹಸಿವಿನ ಸಂಕಟವನ್ನು ಎಲ್ಲರಿಗೂ



ಅರಿವಾಗುವಂತೆ ಮಾಡಿ ಇಡಿ ತಿಂಗಳು ಅವರಿಗೆ ಧಾನ ಧರ್ಮಗಳನ್ನು ನೀಡಿ ಅವರ ಜೀವನವನ್ನು ಸ್ವಲ್ಪ ಮಟ್ಟಿಗಾದರೂ ಸುಧಾರಿಸುವ ಪ್ರಯತ್ನ ರಂಜಾನ್ ತಿಂಗಳಿನಲ್ಲಾಗುತ್ತದೆ.

ತ್ಯಾಗ ಬಲಿದಾನದ ಸಂಕೇತವಾದ ಬಕ್ರಿದ್ ಹಬ್ಬಗಳಲ್ಲಿ ಪ್ರವಾದಿ ಇಬ್ರಾಹೀಮರ ನೆನಪಿಗಾಗಿ ಪ್ರಾಣಿ ಬಲಿಯನ್ನು ದೇವರಿಗೆ ಅರ್ಪಿಸಿ ಅದರ ಮಾಂಸವನ್ನು ಮೂರು ಭಾಗವನ್ನಾಗಿ ಮಾಡಿ ತಮಗೊಂದು ಭಾಗ, ಬಂಧು ಮಿತ್ರರಿಗೊಂದು ಭಾಗ, ಬಡ ಬಗ್ಗರಿಗೊಂದು ಭಾಗ ಮಾಡಿ ಬಡವರು ಹಬ್ಬವನ್ನು ಆಚರಿಸಲು ನೆರವು ಮಾಡಿ ಕೊಡುವುದು ಬಕ್ರಿದ್ ಹಬ್ಬದ ವಿಶೇಷ. ಈ ರೀತಿ ತಾವು ತಿನ್ನುವ ಆಹಾರವನ್ನು ಬಡವರಿಗೆ, ನಿರ್ಗತಿಕರಿಗೆ ಹಂಚಿ ತಮ್ಮ ಆಹಾರದಲ್ಲಿ ಅವರಿಗೂ ಹಕ್ಕಿದೆ ಎನ್ನುವ ಸಮಾನತೆಯ ಸಂದೇಶವನ್ನು ಬಕ್ರಿದ್ ಹಬ್ಬ ಸಾರುತ್ತದೆ.

ಈ ರೀತಿ ಎಲ್ಲರೂ ಸಮಾನತೆ, ಪ್ರೀತಿ, ಸಹಕಾರ ಮನೋಭಾವನೆ, ಶಾಂತಿಯಿಂದ ಜೀವನ ಸಾಗಿಸಬೇಕೆಂಬ ದೊಡ್ಡ ಸಂದೇಶವನ್ನು ಇಸ್ಲಾಂ ಧರ್ಮ ಸಾರುತ್ತದೆ. ಅದೇ ರೀತಿ ನೀವು ಯಾವ ದೇಶದಲ್ಲಿದ್ದೀರೋ ಆ ದೇಶವನ್ನು ಅತಿ ಹೆಚ್ಚು ಪ್ರೀತಿಸಿ ಆ ದೇಶದ ಏಳಿಗೆಗಾಗಿ ಶ್ರಮಿಸಿರಿ ಎಂದು ಇಸ್ಲಾಂ ಧರ್ಮ ತನ್ನ ಅನುಯಾಯಿಗಳಿಗೆ ಕಲಿಸುತ್ತದೆ. ಭಾರತದ ವಿಷಯ ಬಂದಾಗ ಭಾರತೀಯ ಮುಸ್ಲಿಂರು ಪ್ರಪಂಚದಲ್ಲಿಯೇ ಅತಿ ಹೆಚ್ಚು ದೇಶವನ್ನು ಪ್ರೀತಿಸುವವರಾಗಿದ್ದಾರೆ. ಈ ದೇಶಕ್ಕಾಗಿ ಎಷ್ಟೋ ಮುಸ್ಲಿಂರು ಪ್ರಾಣ ತ್ಯಾಗ ಮಾಡಿದ್ದಾರೆ. ಪ್ರಸ್ತುತ ಭಾರತದಲ್ಲಾಗುತ್ತಿರುವ ಬೆಳವಣಿಗೆಗಳನ್ನು ಕಂಡಾಗ ನಾವೆಲ್ಲರೂ ಧರ್ಮದ ತಿರುಳನ್ನು ಅರ್ಥೈಸಿಕೊಳ್ಳಬೇಕಾದ ಅವಶ್ಯಕತೆಯಿದೆ. ಆ ಮೂಲಕ ಮಾನವೀಯತೆ, ಸಮಾನತೆ, ಪರಸ್ಪರ ಸಹಕಾರ ಮನೋಭಾವನೆಗಳನ್ನು ಬೆಳೆಸಿಕೊಂಡು ದೇಶದಲ್ಲಿ ಶಾಂತಿ ಸ್ಥಾಪಿಸುವ ಪ್ರಯತ್ನ ಮಾಡಬೇಕಾಗಿದೆ. ಬಕ್ರಿದ್ ಹಬ್ಬದ ಈ ಸುಸಂದರ್ಭದಲ್ಲಿ ನಾವೆಲ್ಲರೂ ತ್ಯಾಗ ಬಲಿದಾನಗಳ ಸಂದೇಶವನ್ನು ಅರಿತು ಈ ದೇಶದಲ್ಲಿ ಸಂವಿಧಾನಾತ್ಮಕವಾಗಿ ಎಲ್ಲರಿಗೂ ಸಮಾನವಾಗಿ ಬದುಕುವ ಹಕ್ಕಿದೆ. ಇಲ್ಲಿ ಎಲ್ಲರ ಆಚರಣೆಗಳಿಗೂ ಸಮಾನವಾದ ಗೌರವವಿದೆ. ನಮ್ಮ ಧರ್ಮಗಳು ಯಾವುದೇ ಆಗಿರಬಹುದು. ಆದರೆ ವಿವಿದತೆಯಲ್ಲಿ ಏಕತೆಯನ್ನು ಬಿಂಬಿಸುವ ಭಾರತೀಯ ದರ್ಮವೆಂಬುದೊಂದು ಎಲ್ಲಾ ಧರ್ಮಗಳಿಗೂ ಮೀರಿದ್ದು, ಅದನ್ನು ನಾವೆಲ್ಲರೂ ಪಾಲಿಸಬೇಕಾಗಿದೆ. ಎಂಬ ಸಂದೇಶವನ್ನು ಸಾರುವ ಅಗತ್ಯತೆಯಿದೆ.

ಜಗತ್ತಿನ ಎಲ್ಲಾ ಮನುಷ್ಯರಿಗೂ ತಮ್ಮ ತಮ್ಮ ಧರ್ಮಗಳನ್ನು ಆಚರಿಸುವ ಸಮಾನ ಹಕ್ಕಿದೆ. ಯಾರೊಬ್ಬರು ಇನ್ನೊಂದು ಧರ್ಮದ ಮೇಲೆ ಟೀಕೆ, ಟಿಪ್ಪಣಿ ಮಾಡುವುದಾಗಲಿ ಅಥವಾ ಧರ್ಮವನ್ನು ಅವಹೇಳನ ಮಾಡುವುದಾಗಲಿ ಮಾಡುವಂತಿಲ್ಲ. ಹಾಗೆಯೆ ತಮ್ಮ ಧರ್ಮವನ್ನು ಮತ್ತೊಬ್ಬರ ಮೇಲೆ ಬಲವಂತವಾಗಿ ಹೇರುವಂತಿಲ್ಲ ಎಂಬುದು ಇದರರ್ಥ.

ಎಲ್ಲಾ ಧರ್ಮಿಯರ ಆಚರಣೆಗಳಿಗೆ, ನಂಬಿಕೆಗಳಿಗೆ ಗೌರವ ಕೊಡುವುದೇ ನಿಜವಾದ ಮಾನವ ಧರ್ಮ. ನಂಬಿಕೆಯ ಆಧಾರದ ಮೇಲೆ ಧರ್ಮ ನಿಂತಿರುವುದರಿಂದ ಧರ್ಮ ಮತ್ತು ವಿಜ್ಞಾನವನ್ನು ತುಲನಾತ್ಮಕ ದೃಷ್ಟಿಯಿಂದ ವಿಶ್ಲೇಷಿಸುವುದು ನಂಬಿಕೆಗೆ ವಿರುದ್ಧವಾಗಿರುತ್ತದೆ. ಏಕೆಂದರೆ ಪ್ರತಿಯೊಂದು ಧರ್ಮದ ಎಷ್ಟೋ ನಂಬಿಕೆಗಳು ಅಥವಾ ಆಚರಣೆಗಳು ವಿಜ್ಞಾನದ ದೃಷ್ಟಿಗೆ ನಿಲುಕದೆಯಿರುವಂತದ್ದಾಗಿರುತ್ತದೆ. ಅದಕ್ಕಾಗಿ ವೈಜ್ಞಾನಿಕ ಆಧಾರದಲ್ಲಿ ಧರ್ಮವನ್ನು ಪ್ರಶ್ನಿಸುವುದು ಆ ಧರ್ಮವನ್ನು ನಂಬಿ ಬದುಕುತ್ತಿರುವವರ ಭಾವನೆಗಳಿಗೆ ಧಕ್ಕೆಯುಂಟು ಮಾಡಿದಂತಾಗುತ್ತದೆ. ಯಾವುದೇ ಧರ್ಮವಾಗಿರಲಿ ಅದು ಎಂದಿಗೂ ಇನ್ನೊಂದು ಧರ್ಮವನ್ನು ಅವಹೇಳನ ಮಾಡು ಎಂದು ತನ್ನ ಅನುಯಾಯಿಗಳಿಗೆ ಕಲಿಸುವುದಿಲ್ಲ. ಹಾಗೆ ಕಲಿಸುವ ಧರ್ಮ ನಿಜಾರ್ಥದಲ್ಲಿ ಧರ್ಮವೇ ಅಲ್ಲ. ಎಲ್ಲಾ ಧರ್ಮಗಳು ತಮ್ಮ ಅನುಯಾಯಿಗಳಿಗೆ ಮಾನವೀಯತೆ, ಸಮಾನತೆ, ಸಹೋದರತೆಯನ್ನು ಕಲಿಸಿ ಅನ್ಯ ಧರ್ಮಿಯರ ಆಚರಣೆಗಳನ್ನು ಗೌರವಿಸು ಎಂಬ ಸಂದೇಶವನ್ನು ಸಾರುತ್ತವೆ.

**ತೆಂಗು ಹೊಸದುರ್ಗ ತಾಲೂಕಿನ ಪ್ರಮುಖ ವಾಣಿಜ್ಯ ಬೆಳೆ. ತಾಲೂಕಿನಲ್ಲಿ 8738 ಹೇಕ್ಟರ್‌ಅಡಿಕೆ, 43582 ಹೇಕ್ಟರ್ ಪ್ರದೇಶದಲ್ಲಿ ತೆಂಗು ಮರಗಳಿವೆ.**

# ಹೊಸದುರ್ಗ: ಹದ ಮಳೆಗೆ ಚೇತರಿಸಿಕೊಳ್ಳುತ್ತಿರುವ ಅಡಿಕೆ, ತೆಂಗು

» **ನಾಗತಿಹಳ್ಳಿಮಂಜುನಾಥ್**

ಹೊಸದುರ್ಗ:ಕಳೆದ ವರ್ಷದಿಂದ ಮಳೆ ಕೊರತೆಯಿಂದ ಒಣಗುತ್ತಿದ್ದ ತೆಂಗು, ಅಡಿಕೆ ಗಿಡಗಳು ಕಳೆದ ಒಂದು ವಾರದ ಹಿಂದೆ ಅಬ್ಬರವಾಗಿ ಸುರಿದ ಮಳೆಗೆ ಚೇತರಿಸಿಕೊಂಡಿರುವುದು ತಾಲೂಕಿನ ಬಹುತೇಕ ರೈತರ ಮುಖದಲ್ಲಿ ಮಂದಹಾಸದ ನಗು ಮೂಡಿದೆ.

ಈ ಹಿಂದೆ ಪ್ರಮುಖವಾದ ಮಳೆಗಳು ಕೈಕೊಟ್ಟ ಕಾರಣ ಕೊಳವೆಬಾವಿಗಳು ಬತ್ತಿದ್ದವು. ಹೊಸ ಕೊಳವೆ ಬಾವಿ ಕೊರೆಸಿದರೂ ನೀರು ಬರುತ್ತಿರಲಿಲ್ಲ. ಬರುತ್ತಿರುವ ಅಲ್ಪ ಸ್ವಲ್ಪ ನೀರಿನಲ್ಲೇ ಅಡಿಕೆ ಜತೆ ತೆಂಗು ಉಳಿಸಿಕೊಳ್ಳುವುದು ಬೆಳೆಗಾರರಿಗೆ ದೊಡ್ಡ ಸವಾಲಾಗಿ ಪರಿಣಮಿಸಿತ್ತು, ಹಲವು ರೈತರು ಟ್ಯಾಂಕರ್ ನೀರು ಹಾಯಿಸಿ ಹರ ಸಾಹಸ ಮಾಡಿ




ತೋಟ ರಕ್ಷಿಸಿಕೊಂಡಿದಾರೆ ಸಾಕಷ್ಟು ಮಂದಿ ರೈತರು ತಮ್ಮ ಕೈಲಿ ಹಣವಿಲ್ಲದೆ ಟ್ಯಾಂಕರ್ ನೀರು ತೋಟಗಳಿಗೆ ಪೂರೈಸಲಾಗದೆ ತಮ್ಮ ಅಡಿಕೆ ಹಾಗೂ ತೆಂಗಿನ ತೋಟಗಳನ್ನ ಹಾಳು ಮಾಡಿಕೊಂಡಿದ್ದಾರೆ.

ತೆಂಗು ತಾಲೂಕಿನ ಪ್ರಮುಖ ವಾಣಿಜ್ಯ ಬೆಳೆ. ತಾಲೂಕಿನಲ್ಲಿ 8738 ಹೇಕ್ಟರ್‌ಅಡಿಕೆ, 43582 ಹೇಕ್ಟರ್ ಪ್ರದೇಶದಲ್ಲಿ ತೆಂಗು ಮರಗಳಿವೆ. ತೆಂಗು ಅಲ್ಪ ಸ್ವಲ್ಪ ತೇವಾಂಶ ಕೂಡಿಟ್ಟುಕೊಂಡು ತಿಂಗಳುಗಟ್ಟಲೇ ಜೀವ ಹಿಡಿದುಕೊಡುಇರುವ ಮರ. ವರ್ಷ ಕಳೆದರೂ ಮಳೆ ಬಾರದ ಕಾರಣ ತೇವಾಂಶ ಕೊರತೆ ಹಾಗೂ ಬಿಸಿಲಿನ ಝುಳಕ್ಕೆ ಮರದ ಗರಿಗಳು ಒಣಗಿಜೋತು ಬೀಳುವುದು ಸಾಮಾನ್ಯವಾಗಿತ್ತು. ಮುಖ್ಯವಾಗಿತೆಂಗು ಮರಗಳಿಗೆ ಕಾಣಿಸಿಕೊಂಡಿರುವ ಕಪ್ಪುತಲೆ ಹುಳು ಬಾಧೆರೈತರಿಗೆತಲೆ ನೊವಾಗಿದೆ. ಕೀಟ ಭಾದೆಯು ಮರದಿಂದ ಮರಕ್ಕೆ ಹರಡಿತೆಂಗಿನ ತೋಟಗಳು ನೆಲಕಚ್ಚಿವೆ. ಕೀಟ ಬಾಧೆಯು ಹತೋಟಿಗೆತರಲುತೋಟಗಾರಿಕೆ ಇಲಾಖೆ ಮಾಡಿದ ಕಾರ್ಯಕ್ರಮಗಳು ಅಷ್ಟಾಗಿ ಯಶಸ್ಸುಕಂಡಿಲ್ಲ.ಕಳೆದ ಒಂದು ವಾರದ ಹಿಂದೆ ಹಾಗೂ ಮತ್ತೆ ಇದೀಗ ಸುರಿಯುತ್ತಿರುವ ಮಳೆಯಿಂದ ತೆಂಗು ಬೆಳೆಗೆ ತಗುಲಿರುವ ಕಪ್ಪುತಲೆ ಹುಳುವಿನ ಭಾದೆ ಕ್ರಮೇಣ ಕಡಿಮೆಯಾಗಲಿದೆ. ಹುಳುಗಳ ಸಂತನೋತ್ಪತ್ತಿ ಕ್ಷೀಣಿಸಲಿದೆ. ಮತ್ತಷ್ಟು ಮಳೆ ಬಂದರೆ ರೋಗಬಾಧೆ ಹತೋಟಿಗೆ ಬರಲಿದೆ.ಗಿಡಗಳು ಚೇತರಿಸಿಕೊಳ್ಳಲಿವೆ. ರೋಗ ನಿವಾರಣೆಕುರಿತುತೆಂಗು ಸಂಶೋಧನಾಕೇಂದ್ರದ ವಿಜ್ಞಾನಿಗಳಿಂದ ತಾಂತ್ರಿಕ ಮಾಹಿತಿಯನ್ನುಕೊಡಿಸುವ ಮೂಲಕ ತೆಂಗು ಬೆಳೆಗಾರರಿಗೆ ಮಾರ್ಗದರ್ಶನ ನೀಡಿದ್ದೇವೆಎಂದುತೋಟಗಾರಿಕೆ ಇಲಾಖೆ ಹಿರಿಯ ಸಹಾಯಕ ನಿರ್ದೇಶಕ ವೆಂಕಟೇಶ್ ಮಾಹಿತಿ ನೀಡಿದ್ದಾರೆ.

ಕಳೆದ ವರ್ಷ ಮಳೆ ಬಾರದ ಹಿನ್ನೆಲೆಯಲ್ಲಿ ಅತಿಯಾದ ಉಷ್ಣಾಂಶ ಹಾಗೂ ತೇವಾಂಶ ಕೊರತೆಯಿಂದ ಅಡಿಕೆ, ತೆಂಗು ಇಳುವರಿ ಕುಂಠಿತಗೊಂಡಿತ್ತು. ಕೆಲವು ಕಡೆತೋಟ ಉಳಿಸಿಕೊಳ್ಳಲು ರೈತರು ಕೊಳವೆಬಾವಿ ಕೊರೆಸಿದರೂ ನೀರು ಸಿಗಲಿಲ್ಲ. ಅದೃಷ್ಟವಶಾತ್ ಮಳೆ ಬಂದಿದ್ದರಿಂದಅಡಿಕೆ, ತೆಂಗು ಬೆಳೆಗಾರರು ನಿಟ್ಟುಸಿರು ಬಿಡುವಂತಾಗಿದೆ. ಮಳೆಯಿಂದ ತೆಂಗು, ಅಡಿಕೆಗೆ ತಗುಲಿದ್ದ ರೋಗಕ್ರಮೇಣ ನಿವಾರಣೆಯಾಗಲಿದೆ ಎನ್ನುವ ಭಾವನೆ ಬೆಳೆಗಾರರಲ್ಲಿ ಇದೆ. ತಾಲೂಕಿನಲ್ಲಿ ಉತ್ತಮ ಮಳೆಯಾಗುತ್ತಿದೆ.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T